ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 242 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 15–04–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 242 | Title- Code: KARKAN 28269 | Chitradurga | Date: 15-04-2024 Monday | Page: 4 | Price: Rs. 2-00

**ಒಳಪುಟದ ಸುದ್ದಿಗಳು**
ಸಿಎಂ ಸಿದ್ದರಾಮಯ್ಯ ದಲಿತ ವಿರೋಧಿ: ಎನ್.ರವಿಕುಮಾರ್ 2
ಐದು ಗ್ಯಾರಂಟಿಗಳ ಅನುಷ್ಠಾನದಿಂದ ಕಾಂಗ್ರೆಸ್ ಪಕ್ಷದ ಗೆಲುವು ಗ್ಯಾರಂಟಿ 3
ಕಾಂಗ್ರೆಸ್ ಪಕ್ಷದಲ್ಲಿ ಪ್ರಧಾನಿ ಅಭ್ಯರ್ಥಿ ಯಾರು ಎಂಬ ಬಗ್ಗೆ ಉತ್ತರವಿಲ್ಲ: ಬಿಎಸ್‌ವೈ 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಕಮಲ ಕೋಟೆಯಲ್ಲಿ ಈ ಬಾರಿ ಗ್ಯಾರೆಂಟಿ ಯೋಜನೆ ಕೈ ಹಿಡಿಯುತ್ತಾ?

» **ನಮ್ಮ ಜನ ಸಮಾಚಾರ**

ಚಿತ್ರದುರ್ಗ: ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್– ಬಿಜೆಪಿ ಟಿಕೆಟ್ ಫೈಟ್ ಜೋರಾಗಿ ನಡೆಯಿತು. ಒಂದು ರೀತಿ ರಾಜ್ಯದ ಎಲ್ಲಾ ರಾಜಕೀಯ ನಾಯಕರ ಗಮನ ಸೆಳೆಯುವಂತೆ ಮಾಡಿತ್ತು. ಸ್ಥಳೀಯರಿಗೆ ಟಿಕೆಟ್ ನೀಡಬೇಕು ಎನ್ನುವ ಒತ್ತಾಯ ಧ್ವನಿಯು ಜಿಲ್ಲಾ ಕೇಂದ್ರ ಚಿತ್ರದುರ್ಗದಲ್ಲಿ ನಡೆದ ರಾಜಕೀಯ ವಿದ್ಯಮಾನಗಗಳು ಜಿಲ್ಲೆಯ ಜನರ ಗಮಸೆಳೆದಿದ್ದವು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಪರಿಶಿಷ್ಟಜಾತಿಗೆಮೀಸಲುಕ್ಷೇತ್ರವಾಗಿರುವ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಲ್ಲಿ ವಿಶೇಷ ಕ್ಷೇತ್ರ ಎಂದರೆ ತಪ್ಪಗಲಾರದು. ಇಲ್ಲಿನ ರಾಜಕೀಯ ಮತದಾರರ ಒಲವು ವಿಭಿನ್ನ ವಿಶೇಷವಾಗಿದೆ. ಇಲ್ಲಿ ಜಾತಿ ಲೆಕ್ಕಚಾರವು ನಿರ್ಣಾಯಕ ಪಾತ್ರ ವಹಿಸುವ ಕ್ಷೇತ್ರವಾಗಿ ಹೊರ ಹೊಮ್ಮುವ ಮೂಲಕ ಜಿಲ್ಲೆಯ ಜನರ ಗಮನ ಸೆಳೆಯುತ್ತಿದೆ. ಹಾಲಿ ಬಿಜೆಪಿ ಶಾಸಕ ಎಂ.ಚಂದ್ರಪ್ಪ ಪುತ್ರ ಎಂ.ಸಿ. ರಘುಚಂದನ್ ಬಿಜೆಪಿ ಟಿಕೆಟ್ ಪ್ರಬಲ ಆಕಾಂಕ್ಷಿಯಾಗಿದ್ದರಿಂದ ಹೊಳಲ್ಕೆರೆ ಕ್ಷೇತ್ರದಲ್ಲಿ ಹೊಸ ಸಂಚಲನ ಸೃಷ್ಟಿಯಾಗಿತ್ತು.

ಬಿಜೆಪಿ ಟಿಕೆಟ್ ದೊರೆಯುವ ವಿಶ್ವಾಸದಲ್ಲಿ ರಘುಚಂದನ್ ದೈವ ಮೂಲೆಯಿಂದಪ್ರಚಾರಸಹಆರಂಭಿಸುವ ಮೂಲಕ ಅಖಾಡಕ್ಕೆ ಎಂಟ್ರಿ ಕೊಟ್ಟಿದ್ದರು. ಟಿಕೆಟ್ ದೊರೆಯದ ಕಾರಣದಿಂದ ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಅವರ ಪುತ್ರ ರಘು ಚಂದನ್ ಸಾರಿದ ಬಂಡಾಯದ ಪರಿಣಾಮ ಪಕ್ಷದಲ್ಲಿ ನಡೆದ ಬೆಳವಣಿಗೆಗಳು ಬಿಜೆಪಿಗೆ ಮುಜುಗರ ಉಂಟು ಮಾಡಿದ್ದಂತು ಸುಳ್ಳಲ್ಲ. ಚಂದ್ರಪ್ಪ ಕುಟುಂಬ ಟಿಕೆಟ್ ಕೊಡಿಸಲಿಲ್ಲ ಎಂದು ನೇರವಾಗಿ ಯಡಿಯೂರಪ್ಪ ಮತ್ತು ವಿಜಯೇಂದ್ರ ಮೇಲೆ ನುಡಿದ ಮಾತುಗಳು ಬಿಜೆಪಿಯಲ್ಲಿ ಒಡಕು ಮೂಡಿ ಎರಡು ಬಣಗಳಾಗಿ ಒಬ್ಬರಿಗೊಬ್ಬರು ತಮ್ಮ ಅಸಮಾಧಾನ ಹೊರ ಹಾಕಿದ್ದರು. ಪಕ್ಷೇತರ ಅಭ್ಯರ್ಥಿ ಆಗಿ ಸ್ಪರ್ಧೆ ಮಾಡಿಯೇ ತೀರುತ್ತೇವೆ ಎಂದು ಘೋಷಿಸಿ ಸ್ವಾಭಿಮಾನಿ ಸಮಾವೇಶ ಸಹ ಮಾಡಿದರು. ಈ ಎಲ್ಲಾವನ್ನು ಸೂಕ್ಷವಾಗಿ ಗಮನಿಸಿಸ ಬಿಜೆಪಿ ರಾಜ್ಯ ನಾಯಕರು ಎಂಟ್ರಿಯಾಗಿ ಭೇಟಿ ಮಾಡಿದರು ಅಸಮಾಧಾನ ತಣಿಸಲು ಆಗಲಿಲ್ಲ.

ಇದರಿಂದ ಎಚ್ಚೆತ್ತುಕೊಂಡ ಮಾಜಿ ಸಿಎಂ ಯಡಿಯೂರಪ್ಪ ತಮ್ಮ ನಿವಾಸಕ್ಕೆ ಬರಲು ಬುಲಾವ್ ನೀಡಿ ಮಾತುಕತೆ ಮೂಲಕ ಬಿಜೆಪಿಯಲ್ಲಿನ ವಾತಾವರಣ ವನ್ನೂ ತಿಳಿಗೊಳಿಸಿದ ನಂತರ ಲೋಕಾ ಚುನಾವಣಾ ಪ್ರಚಾರ ಭರ್ಜರಿಯಾಗಿ ಆರಂಭಿಸಿದ್ದು ಮುನಿಸು ಮರೆತು ಎರಡೂ ಪಕ್ಷಗಳು ಅಖಾಡಕ್ಕೆ ಧುಮುಕ್ಕಿದ್ದಾರೆ.

ಬಿಜೆಪಿ ಪಕ್ಷದ ರಾಜ್ಯ ಮುಖಂಡರು ಶಾಸಕ ಚಂದ್ರಪ್ಪ, ರಘುಚಂದನ್‌ರನ್ನು ಖುದ್ದು ಕರೆಸಿ ಮಾತುಕತೆ ನಡೆಸಿದ ನಂತರವೂಸಹಒಳಒಳಗೆಸ್ಥಳೀಯವಾಗಿ ಗುಂಪುಗಾರಿಕೆ ರಾಜಕರಾಣ ನಿಂತಿಲ್ಲ.

ಈಗ ಹೊಳಲ್ಕೆರೆ ಯಲ್ಲಿ ಚಂದ್ರಪ್ಪ ನೇತೃತ್ವದಲ್ಲಿ ಒಂದು ಗುಂಪು, ಬಿಜೆಪಿ, ಬಿಎಸ್‌ವೈ ನಿಷ್ಠರ ಮತ್ತೊಂದು ಗುಂಪು ಇದ್ದು ಎರಡು ಪ್ರತ್ಯೇಕ ಸಭೆಗಳನ್ನು ಸಹ ಹೊಳಲ್ಕೆರೆಯಲ್ಲಿ ಮಾಡಿದ್ದಾರೆ. ಆದರೆ ಶುಕ್ರವಾರ ವಿಜಯೇಂದ್ರ ಹೊಳಲ್ಕೆರೆ ಕ್ಷೇತ್ರಕ್ಕೆ ಪ್ರಚಾರಕ್ಕೆ ಆಗಮಿಸಿದ ಸಂದರ್ಭದಲ್ಲಿ ಎಲ್ಲಾರನ್ನು ಒಟ್ಟಾಗಿ ತೆಗೆದುಕೊಂಡು ಹೋಗುವ ಕೆಲಸ ಮಾಡಿದ್ದಾರೆ.ನಾವೆಲ್ಲರೂ ಒಗ್ಗಟ್ಟಾಗಿದ್ದೇವೆ ಎಂಬ ಸಂದೇಶ ಸಾರಿದ್ದರು ಸಹ ಈ ಒಗ್ಗಟ್ಟು ಮುಂದುವರೆಯುತ್ತದೆಯೇ ಎಂಬುದು ಕಾದು ನೋಡಬೇಕಿದೆ..

ಬಿಜೆಪಿ ಪಕ್ಷದ ಇಂತಹ ಬೆಳವಣಿಗೆಗಳಿಗೆ ಭಿನ್ನವಾಗಿ ಹೊಳಲ್ಕೆರೆ ಕಾಂಗ್ರೆಸ್‌ನಲ್ಲಿ ಉತ್ಸಾಹದ ವಾತಾವರಣ ಕಾಣುತ್ತಿದ್ದು ಕಳೆದ ಐದು ದಿನಗಳಿಂದ ಮಾಜಿ ಸಚಿವ ಹೆಚ್.ಆಂಜನೇಯರ ನೇತೃತ್ವದಲ್ಲಿ ನಿರಂತರವಾಗಿ ಹಳ್ಳಿಗಳಿಗೆ ತೆರಳಿ ಕ್ಷೇತ್ರದಲ್ಲಿ ಪ್ರಚಾರ ಕಾರ್ಯಕ್ಕೆ ವೇಗ ನೀಡಿದ್ದು ಭರ್ಜರಿ ಕ್ಯಾಂಪ್ಯನ್ ಆರಂಭಿಸಿದ್ದಾರೆ. ಈಗಾಗಲೇ ತಾಳ್ಯ, ಎಚ್.ಡಿ. ಪುರ, ಚಿಕ್ಕಜಾಜೂರು, ಭರಮಸಾಗರ ಹೋಬಳಿಗಳಲ್ಲಿ ಪ್ರಚಾರ ನಡೆಸಿದ್ದಾರೆ. ಸದ್ಯ ಕ್ಷೇತ್ರದಲ್ಲಿ ಮಾದಿಗ ಸಮುದಾಯದ ಮತಗಳು ಸೇರಿದಂತೆ ಕಾಂಗ್ರೆಸ್‌ಗೆ ಶಕ್ತಿ ತುಂಬುವಂತಹ ಅಹಿಂದ ಮತಗಳನ್ನು ಹಿಡಿದಿಟ್ಟುಕೊಳ್ಳುವುದು ಆಂಜನೇಯ ಹರಸಾಹಸ ಪಡುತ್ತಿದ್ದು ದೊಡ್ಡ ಸವಾಲಾಗಿದೆ. ಈ ವಿಚಾರದಲ್ಲಿ ಕಾಂಗ್ರೆಸ್ ಪಕ್ಷದವರಿಗಿಂತ ಬಿಜೆಪಿಗೆ ಈ ತೊಂದರೆ ಇಲ್ಲ. ಬಿಜೆಪಿಯ ಭದ್ರ ಕೋಟೆ ಎಂಬ ಖ್ಯಾತಿ ಮೂಲಕ ಬಿಂಬಿತವಾಗಿರುವ ಹೊಳಲ್ಕೆರೆಯಲ್ಲಿ ಪ್ರಬಲ ಲಿಂಗಾಯಿತ ಸಮುದಾಯದ ಮತ ಬ್ಯಾಂಕ್ ಗಟ್ಟಿಯಾಗಿದೆ. ಇದೇ ಕಾರಣಕ್ಕೆ ಕಳೆದ ಮೂರು ಲೋಕಸಭೆ ಚುನಾವಣೆ ಯಲ್ಲೂ ಒಂದು ಚುನಾವಣೆಗಿಂತ ಮತ್ತೊಂದು ಚುನಾವಣೆಯಲ್ಲಿ ಬಿಜೆಪಿ ಹೆಚ್ಚಿನ ಲೀಡ್ ಪಡೆಯುತ್ತಲೇ ಬಂದಿದೆ. ಕಾಂಗ್ರೆಸ್ ಸರ್ಕಾರದ ಗ್ಯಾರೆಂಟಿ ಯೋಜನೆಗಳ ಮುಂದೆ ಬಿಜೆಪಿ ಪ್ರಾಬಲ್ಯ ಕುಗ್ಗುತ್ತಾ? ಸಂಪ್ರಾದಾಯಕ ಮತ ಪಡೆದು ಓಟ ಮುಂದುವರೆಸುತ್ತಾ? ಎಂಬುದರ ಜೊತೆಗೆ ಈ ಬಾರಿಯಾದರೂ ಕಾಂಗ್ರೆಸ್ ತನ್ನ ಶಕ್ತಿ ವೃದ್ಧಿಸಿಕೊಂಡು ಪ್ರಾಬಲ್ಯ ಸಾಧಿಸಲಿದೆಯಾ? ಎಂಬುದು ಚುನಾವಣೆ ಮುಗಿದು ಫಲಿತಾಂಶದ ನಂತರ ಎಲ್ಲಾ ಲೆಕ್ಕಚಾರಗಳು ನಡೆಯುತ್ತಿರುತ್ತವೆ.




ನಮ್ಮಜನ ವಿಶೇಷ

**2 ಚುನಾವಣೆಯಲ್ಲಿ ಬಿಜೆಪಿ ಲೀಡ್**
- 2014ರಲ್ಲಿ 13,659 ಮತಗಳ ಲೀಡ್
- 2019ರಲ್ಲಿ 38,082 ಮತಗಳ ಲೀಡ್

**ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದ 2023 ರ ಫಲಿತಾಂಶ**
- ಎಂ.ಚಂದ್ರಪ್ಪ ಬಿಜೆಪಿ 87,987
- ಎಚ್.ಆಂಜನೇಯ ಕಾಂಗ್ರೆಸ್ 82,281

**ಹೊಳಲ್ಕೆರೆ ವಿಧಾನ ಸಭಾ ಕ್ಷೇತ್ರದ 2019 ರ ಲೋಕಸಭಾ' ಫಲಿತಾಂಶ**
- ಬಿ.ಎನ್.ಚಂದ್ರಪ್ಪ ಕಾಂಗ್ರೆಸ್ 59,398
- ಎ.ನಾರಾಯಣಸ್ವಾಮಿ ಬಿಜೆಪಿ 97,480

**ಲೋಕ ಅಭ್ಯರ್ಥಿಗಳ ಪ್ಲಸ್–ಮೈನಸ್**

| | |
|---|---|
| ಮೋದಿ ಅಲೆ ಮತ್ತು ಲಿಂಗಾಯತ ಸಮುದಾಯ ಮತಗಳು ಬಿಜೆಪಿಗೆ | (+) |
| ಚಂದ್ರಪ್ಪ ಮತ್ತು ಪುತ್ರರ ಸಂಧಾನ | (+) |
| ದಲಿತ ಮತ್ತು ಅಹಿಂದ, ಹಿಂದುಳಿತ ಮತಗಳು ಕಾಂಗ್ರೆಸ್‌ಗೆ | (+) |
| ಗ್ಯಾರೆಂಟಿ ಯೋಜನೆಗಳು ಕಾಂಗ್ರೆಸ್‌ಗೆ | (+) |
| ಮಾಜಿ ಸಚಿವ ಹೆಚ್.ಆಂಜನೇಯ ಹೊಳಲ್ಕೆರೆ ಕ್ಷೇತ್ರಕ್ಕೆ ಕಡಿಮೆ ಗಮನ ಹರಿಸುತ್ತಿರುವುದು | (-) |
| ಬಿಜೆಪಿಯ ಬಣ ರಾಜಕೀಯ ಬಿಜೆಪಿಗೆ | (-) |

**ಹೊಳಲ್ಕೆರೆ ವಿಧಾನ ಸಭಾ ಕ್ಷೇತ್ರದಲ್ಲಿ**

2013 ರಲ್ಲಿ ಕಾಂಗ್ರೆಸ್‌ನ ಹೆಚ್. ಆಂಜನೇಯ ತರುವಾಯ 2018 , 2023 ನಿರಂತರವಾಗಿ ಬಿಜೆಪಿಯ ಎಂ. ಚಂದ್ರಪ್ಪ ಗೆಲುವಿಗೆ ನಗೆ ಬೀರುತ್ತಾ ಬಂದಿದ್ದಾರೆ. 2018 ರಲ್ಲಿ ಶಾಸಕ ಚಂದ್ರಪ್ಪ 38,940 ಮತಗಳ ಲೀಡ್ ಪಡೆದಿದ್ದರು. ಕಳೆದ ವಿಧಾನ ಸಭಾ ಚುನಾವಣೆಯಲ್ಲಿ 5,706 ಮತಗಳ ಅಲ್ಪ ಲೀಡ್ ಗೆಲುವು ಸಾಧಿಸಿದ್ದರು.ಈ ಬಾರಿ ವಿಧಾನ ಸಭೆ ಚುನಾವಣೆಯಲ್ಲಿ ಆಗಿರುವ ಲೀಡ್ ವ್ಯತ್ಯಾಸ ಮುಂದುವರೆದು ಕಾಂಗ್ರೆಸ್ ಗೆ ವರವಾಗಲಿದೆಯಾ ಅಥವಾ ಹಳೆ ಲೀಡ್ ನೀಡಿ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಮರಳಿ ಪ್ರಾಬಲ್ಯ ಸಾಧಿಸುತ್ತಾ ಎಂಬುದು ಕಾದು ನೋಡಬೇಕಿದೆ..




## ಬಿಜೆಪಿಯ ಕಪಟನಾಟಕಗಳಿಗೆ ಮತದಾರನಿಂದ ತಕ್ಕಪಾಠ : ಎಚ್.ಆಂಜನೇಯ

# ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಕಾಂಗ್ರೆಸ್ ಜಯಭೇರಿ

» **ಚಳ್ಳಕೆರೆ**

ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ 20 ಸ್ಥಾನ, ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲೂ ಈ ಬಾರಿ ಕಾಂಗ್ರೆಸ್ ಜಯಭೇರಿ ಬಾರಿಸಲಿದೆ ಎಂದು ಮಾಜಿ ಸಚಿವ ಎಚ್. ಆಂಜಯನೇಯ ತಿಳಿಸಿದರು.

ಅವರು, ಇಲ್ಲಿನ ಗುರುರಾಘವೇಂದ್ರ ಕಲ್ಯಾಣಮಂಟಪದಲ್ಲಿ ಕಾಂಗ್ರೆಸ್ ಪಕ್ಷ ಹಮ್ಮಿಕೊಂಡಿದ್ದ ಲೋಕಸಭಾ ಕ್ಷೇತ್ರದ ಚುನಾವಣಾ ಪ್ರಚಾರ ಸಭೆಯನ್ನು ಜ್ಯೋತಿಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ರಾಷ್ಟ್ರದಲ್ಲಿ ಕೋಮುಭಾವನೆ ಬಿತ್ತುವ ಮೂಲಕ ಭಾರತೀಯ ಜನತಾ ಪಕ್ಷ ಮತದಾರರನ್ನು ತಪ್ಪುದಾರಿಗೆ ಎಳೆಯುತ್ತಿದೆ. ರಾಷ್ಟ್ರದಲ್ಲಿ ಸುಧೀರ್ಘವಾದ ಆಡಳಿತ ನಡೆಸಿದ ಬಡವರ ಕಲ್ಯಾಣಕ್ಕೆ ನೆರವಾದ ದೀನ, ದಲಿತರ ಶೋಷಿತರ ಬದುಕಿಗೆ ಆಸರೆಯಾದ ಪಕ್ಷ ಕಾಂಗ್ರೆಸ್ ಮಾತ್ರ ಎಂದರು. ಲೋಕಸಭಾ ಚುನಾವಣೆಯಲ್ಲಿ ಚಿತ್ರದುರ್ಗ ಕ್ಷೇತ್ರವೂ ಸೇರಿದಂತೆ ರಾಜ್ಯದ 20ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಪಕ್ಷ ಗೆಲುವು ಸಾಧಿಸಲಿದೆ ಎಂದರು.



ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಐದು ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ರಾಜ್ಯದ ಲಕ್ಷಾಂತರ ಜನರ ಬದುಕಿಗೆ ಜೀವತುಂಬಿದೆ. ಎಲ್ಲಾ ವರ್ಗದ ಜನ ನೆಮ್ಮದಿಯ ಜೀವನ ನಡೆಸಲು ಸಾಧ್ಯವಾಗಿದೆ. ಬಿಜೆಪಿ ಎಂದೂ ಉತ್ತಮ ಕೆಲಸ ಮಾಡಿದ ಉದಾಹರಣೆ ಇಲ್ಲ. ಬಿಜೆಪಿಯ ಪೊಳ್ಳು ಭರವಸೆಗಳಿಗೆ ಜನತೆ ಮಾರುಹೋಗಬಾರದು ಎಂದರು.

ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್. ವೈ.ಗೋಪಾಲಕೃಷ್ಣ ಮಾತನಾಡಿ, ಕಳೆದ ಹತ್ತು ವರ್ಷಗಳಿಂದ ರಾಷ್ಟ್ರದಲ್ಲಿ ಆಡಳಿತ ನಡೆಸಿದಬಿಜೆಪಿಜನತೆಗೆನೀಡಿದಯಾವುದೇ ಭರವಸೆ ಈಡೇರಿಲ್ಲ, ವಿಶೇಷವಾಗಿ ರಾಜ್ಯಕ್ಕೆ ಬರುವ ಆದಾಯವನ್ನೇ ಕಡಿತಗೊಳಿಸಿದೆ.

ಪುಟ 2

**ಫಾಸ್ಟ್ ನ್ಯೂಸ್**

### ಏ.17 ರಿಂದ ಬೇವಿನಳಮ್ಮ ದೇವಿಯ ಜಾತ್ರಾಮಹೋತ್ಸವ



» **ಹೊಸದುರ್ಗ**

ತಾಲೂಕಿನ ಮಾಡದಕೆರೆ ಹೋಬಳಿಯ ಬೇವಿನಹಳ್ಳಿ ಗ್ರಾಮದ ಬೆಟ್ಟದ ಮೇಲೆ ನೆಲೆಸಿರುವ ಸುತ್ತಮುತ್ತಲ ಗ್ರಾಮಗಳ ಅಧಿದೇವತೆ ಶ್ರೀ ಬೇವಿನಹಳ್ಳಿ ಕರಿಯಮ್ಮ (ಬೇವಿನಳಮ್ಮ) ದೇವಿಯ ಜಾತ್ರಾ ಮಹೋತ್ಸವ ಇದೇ ಏಪ್ರಿಲ್ ತಿಂಗಳ 17 ರಿಂದ 24 ರ ವರೆಗೆ ಅಂದರೆ 8 ದಿನಗಳ ಕಾಲ ಧಾರ್ಮಿಕ ಕಾರ್ಣಿಕದಂತೆ ಸಾಂಪ್ರದಾಯದ ಪ್ರಕಾರ ನಡೆಯಲಿದೆ. ಏ.17 ರ ಬುಧವಾರ ಅಮ್ಮನವರ ದೇವಾಲಯದಲ್ಲಿ ಬೇವಿನಹಳ್ಳಿ ಗ್ರಾಮಸ್ಥರು ಹಾಗೂ ಬೀರೇನಹಳ್ಳಿ ಗ್ರಾಮದ ಬಗ್ಗೆನಹಳ್ಳಿ ಜಲ್ದೆನವರ ವಂಶಸ್ಥರಿಂದ ಧ್ವಜಾರೋಹಣ,ಬೇರಿತಾಂಡನ,ಅಂಕುರಾರ್ಪಣೆ ಸೇವೆ, ದೇವಾಲಯದ ಮುಂಭಾಗ ಮದಲಿಂಗಿತ್ತಿ ಚಪ್ಪರದ ಸೇವೆ ನಡೆಯಲಿದ್ದು, ಅದರಂತೆಯೇ ಅಂದು ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಮಾಡದಕೆರೆ ಗ್ರಾಮದಲ್ಲಿ ಗ್ರಾಮದ ಗೌಡರು ಹಾಗೂ ಗ್ರಾಮಸ್ಥರಿಂದ ಮದಲಿಂಗತ್ತಿ ಶಾಸ್ತ್ರಕಾರ್ಯ ನಡೆಯಲಿದೆ. ಅಮ್ಮನವರು ಬೇವಿನಹಳ್ಳಿಗೆ ತೆರಳಿದ ಮೇಲೆ ಅತ್ತಿಮಗೆ ಗ್ರಾಮದ ಅಟ್ಟಣದ ವಂಶಸ್ಥರು ಹಾಗೂ ಭಕ್ತರಿಂದ ಸಂಜೆ 6 ಗಂಟೆಗೆ ಉಯ್ಯಾಲೆ ಉತ್ಸವ ಜರುಗಲಿದೆ. 19ರ ಶುಕ್ರವಾರ ರಾತ್ರಿ 8 ಸುಮಾರಿನಲ್ಲಿ ಜಲ್ದೆನವರ ವಂಶಸ್ಥರು ಹಾಗೂ ಭಕ್ತರಿಂದ ನಡೆಮುಡಿ ಸೇವೆ, ಜಲದಿ ಗಂಗಸ್ಥಾನ ಮತ್ತು ಮದಾಲ್ಸೆ ಉತ್ಸವ ನಡೆಯಲಿದ್ದು, 20ರ ಶನಿವಾರ ರಾತ್ರಿ ಬೇವಿನಹಳ್ಳಿ ಗ್ರಾಮಸ್ಥರಿಂದ ಹೂವಿನ ಉತ್ಸವ ನಡೆಯಲಿದೆ. 21 ರ ಭಾನುವಾರ ಮಧ್ಯಾಹ್ನ 3 ಗಂಟೆಗೆ ಅತ್ತಿಮಗೆ ಗ್ರಾಮದ ಅಟ್ಟಣದ ವಂಶಸ್ಥರಿಂದ ಸರಗಂಬಲಿ ಸೇವೆ, 4 ಗಂಟೆಗೆ ಲಕ್ಕಿಹಳ್ಳಿ ಅಡಿವಪ್ಪನವರ ವಂಶಸ್ಥರಿಂದ ಗದ್ದುಗೆ ಕಂಬಳಿ ಸೇವೆ, ಸಂಜೆ 5 ಗಂಟೆಗೆ ತೊಗರಿಗೊಂದಿ ವಂಶಸ್ಥರು ಹಾಗೂ ರಾಮಜ್ಜನಹಳ್ಳಿ ಗ್ರಾಮಸ್ಥರಿಂದ ಗದ್ದುಗೆ ಉಯ್ಯಾಲೆ ಉತ್ಸವ ಜರುಗಲಿದೆ. 22 ರ ಸೋಮವಾರ ಮಧ್ಯಾಹ್ನ 3 ಗಂಟೆಗೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅಮ್ಮನವರ ರಥೋತ್ಸವ ನಡೆಯಲಿದೆ. 23 ರ ಮಂಗಳವಾರ ಮಧ್ಯಾಹ್ನ 4 ಕ್ಕೆ ಸೋಮನ ಪೂಜಾರರಿಂದ ಸಿಡಿ ಉತ್ಸವ ಹಾಗೂ ಹೂವಿನ ಉತ್ಸವ ನೆರವೇರಲಿದ್ದು, ರಾತ್ರಿ 9 ಗಂಟೆಗೆ ರಂಗವ್ವನಹಳ್ಳಿ, ಶೀರನಕಟ್ಟೆ, ಅಯ್ಯನಹಳ್ಳಿ, ಮಲ್ಲಾಪುರ, ನಾಗತೀಹಳ್ಳಿ, ಕೋಡಿಹಳ್ಳಿ, ಹುಣಸೇಕಟ್ಟೆ ಹಾಗೂ ಇನ್ನಿತರ ಗ್ರಾಮಗಳ ಭಕ್ತರಿಂದ ಹಾಲು ಪಲ್ಲಕ್ಕಿ ಉತ್ಸವ ನಡೆಯಲಿದೆ. 24ರ ಬುಧವಾರ ಬೆಳಿಗ್ಗೆ 10 ಗಂಟೆಗೆ ಶೀರನಕಟ್ಟೆ ಗ್ರಾಮಸ್ಥರಿಂದ ಓಕಳಿ ಸೇವೆ ನೆರವೇರಲಿದೆ. ಸಂಜೆ ಪೂಜಾರರ ವಂಶಸ್ಥರು ಹಾಗೂ ಸಕಲ ಭಕ್ತಾದಿಗಳು ಸೇರಿ ಅಮ್ಮನವರನ್ನು ಲಕ್ಕಿಹಳ್ಳಿಗೆ ಬಿಜಂಗ್ಯೆಯುವ ಕಾರ್ಯ ನಡೆಯಲಿದೆ ಎಂದು ಬೇವಿನಹಳ್ಳಿ ಶ್ರೀ ಕರಿಯಮ್ಮ ದೇವಿ ದೇವಸ್ಥಾನದ ಜೀರ್ಣೋದ್ಧಾರ ಅಭಿವೃದ್ಧಿ ಸೇವಾ ಟ್ರಸ್ಟ್ ತಿಳಿಸಿದೆ.

# ಸಿದ್ದರಾಮಯ್ಯ ದಲಿತ ವಿರೋಧಿ: ರವಿಕುಮಾರ್

» **ನಮ್ಮ ಜನ ಸಮಾಚಾರ**

ಚಿತ್ರದುರ್ಗ ಏ.14 :ಅಂಬೇಡ್ಕರ್ ಕೊನೆಯುಸಿರೆಳೆದ ದಿನದಂದು ಅವರ ಸಂಸ್ಕಾರಕ್ಕೆ ದೆಹಲಿಯಲ್ಲಿ 6-3 ಅಡಿ ಜಾಗವನ್ನು ಕಾಂಗ್ರೆಸ್ ಸರ್ಕಾರ ನೀಡಲಿಲ್ಲ. ಆದರೆ ನೆಹರುರವರಿಗೆ 52.6 ಎಕರೆ, ಇಂದಿರಾಗಾಂಧಿಯವರಿಗೆ 45 ಎಕರೆ ಹಾಗೂ ರಾಜೀವ್ ಗಾಂಧಿಯವರಿಗೆ 15 ಎಕರೆ ಒಟ್ಟಾರೆ ನೆಹರು ಕುಟುಂಬಕ್ಕೆ 110 ಎಕರೆಗೂ ಹೆಚ್ಚು ಜಾಗ ನೀಡಿದರು. ಅಂಬೇಡ್ಕರ್ ಮೃತದೇಹವನ್ನು ತೆಗೆದುಕೊಂಡು ಹೋಗಲು ಟ್ರಾನ್ಸ್ ಪೋರ್ಟ್ ವ್ಯವಸ್ಥೆ ಸಹ ನೀಡಲಿಲ್ಲ. ಇದು ಕೇವಲ ದಲಿತರಿಗೆ ಮಾಡಿದ ಅಪಮಾನವಲ್ಲ. ಇದು ರಾಷ್ಟ್ರಕ್ಕೆ ಮಾಡಿದ ಅಪಮಾನ ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಕಾಂಗ್ರೆಸ್ ವಿರುದ್ಧ ಕಿಡಿಕಾರಿದರು. ಚಿತ್ರದುರ್ಗ ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಂಬೇಡ್ಕರ್ ಅಂತಹ ಮಹಾನ್ ವ್ಯಕ್ತಿಯನ್ನು ಕಾಂಗ್ರೆಸ್ ಪಕ್ಷ ನಮ್ಮ ರಾಷ್ಟ್ರದ ಪ್ರಧಾನಮಂತ್ರಿಯಾಗಿ ಮಾಡಬಹುದಿತ್ತು. ಪ್ರಧಾನಮಂತ್ರಿ ಮಾತು ದೂರ ಉಳಿಯಿತು.. ಕೊನೆಗೆ ಸಂಸದರಾಗಿ ಮಾಡಲು ಅವಕಾಶವಿತ್ತು. ಕಾಂಗ್ರೆಸ್ ಮಾತ್ರ ಅತ್ಯಂತ ಅವಮಾನೀಯವಾಗಿ ಚುನಾವಣೆಯಲ್ಲಿ ಸೋಲಿಸುವ ಕೆಲಸ ಮಾಡಿತು. ಅಂಬೇಡ್ಕರ್ ಅವರನ್ನು ಸೋಲಿಸಿದ ನಾರಾಯಣ ಸದೋಬ ಕಜ್ರೋಲ್ಕರ್ ರವರಿಗೆ ಕಾಂಗ್ರೆಸ್ ಪಕ್ಷ ಪದ್ಮ ವಿಭೂಷಣ ಪ್ರಶಸ್ತಿ ಕೊಟ್ಟು ಗೌರವಿಸುತ್ತೆ. ಅಂಬೇಡ್ಕರ್ ಅಂತ್ಯದವರೆಗೂ ಕಾಂಗ್ರೆಸ್ ಪಕ್ಷ ಭಾರತರತ್ನ ಪ್ರಶಸ್ತಿ ಕೊಡಲಿಲ್ಲ.. ಅಂಬೇಡ್ಕರ್ ರವರಿಗೆ ಭಾರತ ರತ್ನ ಪ್ರಶಸ್ತಿ ನೀಡಿದ್ದು ಅಟಲ್ ಬಿಹಾರಿ ವಾಜಪೇಯಿ ಅವರ ಸರ್ಕಾರದಲ್ಲಿ ಎಂದು ತಾವು ಎಂದು ಮರೆಯಬಾರದು.





ದಲಿತರ ಬದುಕಿಗೆ ಸೂರ್ಯನಂತೆ ಕೆಲಸ ಮಾಡಿದ ಈ ದೇಶದ ಬೆಳಕು ಅಂಬೇಡ್ಕರ್ ಜಯಂತಿಯನ್ನು ಬಿಜೆಪಿ ಇಂದು ಆಚರಣೆ ಮಾಡುತ್ತಿದೆ.ಹಿಂದೂ ಸಮಾಜದ ಪುನರುತ್ಥಾನದ ಚೇತನ ಅಂಬೇಡ್ಕರ್ ರವರು... ದಲಿತರನ್ನು.. ಅಸ್ಪೃಶ್ಯರನ್ನು. ಮನುಷ್ಯರಂತೆ ಕಾಣಬೇಕೆಂದು ವಾದಿಸಿದ ಮಹಾನ್ ಮಾನವತವಾದಿ.ನವೆಂಬರ್-26 ಸಂವಿಧಾನವನ್ನು ಜಾರಿಯಾದ ದಿನವನ್ನು ಸಂವಿಧಾನ ಸಂಸ್ಥಾಪನಾ ದಿನವನ್ನಾಗಿ ಮಾಡಿದ್ದು ಬಿಜೆಪಿ ಸರ್ಕಾರ. ಕಾಂಗ್ರೆಸ್ ಪಕ್ಷ ದಲಿತರನ್ನು ಕೇವಲ ಮತ ಬ್ಯಾಂ[illegible]ನ್ನಾಗಿ ಮಾಡಿಕೊಂಡಿದೆ... ಕಾಂಗ್ರೆಸ್ ನವರು ಸಂವಿಧಾನವನ್ನು ಸರಿಯಾದ ರೀತಿಯಲ್ಲಿ ಜಾರಿ ಮಾಡಲಿಲ್ಲ. ಅಂಬೇಡ್ಕರ್ ರವರ ಜನ್ಮಭೂಮಿಯನ್ನು ಬಿಜೆಪಿ ಪಕ್ಷ ಅಭಿವೃದ್ಧಿಪಡಿಸಿದೆ.. ಅಂಬೇಡ್ಕರ್ ರವರು ಲಂಡನ್ ನಲ್ಲಿ ಓದಿದ ಜಾಗವನ್ನು ಮ್ಯೂಸಿಯಂ ಮಾಡಲಾಗಿದೆ.

ದೇಶದಲ್ಲಿ ಕೋಮುಗಲಭೆ ಹೆಚ್ಚಾಗಲು ಕಾರಣ ಕಾಂಗ್ರೆಸ್ ಪಕ್ಷ. ವಿಧಾನಸೌಧದಲ್ಲಿ ನಿಂತುಕೊಂಡು ಪಾಕಿಸ್ತಾನ ಜಿಂದಾಬಾದ್ ಕೂಗಿದವರನ್ನು ರಕ್ಷಣೆ ಮಾಡುವ ಪಕ್ಷ ಕಾಂಗ್ರೆಸ್ ಪಕ್ಷ. ಅಂಬೇಡ್ಕರ್ ಗೆ ಅಪಮಾನ ಮಾಡಿದ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಬೇಕು. ಸ್ವತಃ ಅಂಬೇಡ್ಕರ್ ರವರೇ ಹೇಳಿದ್ದರು ಕಾಂಗ್ರೆಸ್ ಪಕ್ಷ ಎನ್ನುವುದು ಒಂದು ಉರಿಯುವ ಮನೆ... ಆ ಪಕ್ಷಕ್ಕೆ ನಾನು ಎಂದು ಕಾಲಿಡಲ್ಲ ಅಂತ ಹೇಳಿದ್ದರು. ಕಾಂಗ್ರೆಸ್ ಪಕ್ಷವನ್ನು ಸೋಲಿಸುವುದೇ ಅಂಬೇಡ್ಕರ್ ಅವರಿಗೆ ಮಾಡುವ ಸನ್ಮಾನ. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಬಹಳ ದಿನ ಇರಲ್ಲ... ನಾವು ಯಾವುದೇ ಆಪರೇಷನ್ ಮಾಡಲ್ಲ... ಅವರೇ ಮಾಡಿದಂತ ಕುತಂತ್ರ ಕೆಲಸಗಳಿಂದ ಸರ್ಕಾರ ಬಿದ್ದು ಹೋಗುತ್ತೆ ರವಿಕುಮಾರ್ ಭವಿಷ್ಯ ನುಡಿದರು.

ಕೆ.ಹೆಚ್ ಮುನಿಯಪ್ಪ , ಪರಮೇಶ್ವರ್ ಅವರನ್ನು ಸೋಲಿಸಿ ಮುಖ್ಯಮಂತ್ರಿ ಹಾದಿ ಸುಗಮ ಮಾಡಿಕೊಂಡಿರುವ ಸಿದ್ದರಾಮಯ್ಯ ಸೋಲಿಸಿ ದಲಿತ ವಿರೋಧಿಯಾಗಿದ್ದಾರೆ..ಮುಖ್ಯಮಂತ್ರಿ ಸ್ಥಾನಕ್ಕೆ ಸ್ಪರ್ಧಿಯಾಗಿದ್ದ ಮಲ್ಲಿಕಾರ್ಜುನ ಖರ್ಗೆ ತಂತ್ರ- ಕುತಂತ್ರದಿಂದ ದೆಹಲಿಗೆ ಕಳಿಸಿದ್ದಾರೆ. ದಲಿತರ ಹಣವನ್ನು ಬೇರೆಡೆ ಇಲಾಖೆಗೆ ವರ್ಗಾವಣೆ ಮಾಡಿರುತ್ತಾರೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರುಳಿ, ಪ್ರಧಾನ ಕಾರ್ಯದರ್ಶಿ ಸಂಪತ್, ಪಕ್ಷದ ಮುಖಂಡರಾದ ನಾಗರಾಜ್ ಬೇಂದ್ರೆ, ದಗ್ಗೆ ಶಿವಪ್ರಕಾಶ್ ಇದ್ದರು.



**ಭಾರತೀಯ ಜನತಾ ಪಾರ್ಟಿಯ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣಾ ಕಾರ್ಯಾಲಯದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ರವರ ಜನ್ಮ ದಿನಾಚರಣೆ ಆಚರಿಸಲಾಯಿತು. ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್.ರವಿಕುಮಾರ್, ಜಿಲ್ಲಾಧ್ಯಕ್ಷ ಎ.ಮುರಳಿ, ಡಾ.ಸಿದ್ಧಾರ್ಥ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಜಿ.ಹೆಚ್.ಮೋಹನ್, ಸಿದ್ದೇಶ್ವರ, ಎಸ್‌ಸಿ ಮೋರ್ಚಾ ಪದಾಧಿಕಾರಿಗಳಾದ ಕರಿಕೆರೆ ತಿಪ್ಪೆಸ್ವಾಮಿ, ಪಾಂಡು, ಕೃಷ್ಣಮೂರ್ತಿ ಉಪಸ್ಥಿತರಿದ್ದರು.**

# ಸಂಘಟನೆಯ ಬಲವೇ ಕಾಂಗ್ರೆಸ್ ಬಲ : ಚಂದ್ರಪ್ಪ



» **ಪಾವಗಡ**

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಪಾವಗಡ ವಿಧಾನಸಭಾ ಕ್ಷೇತ್ರದಲ್ಲಿಂದು ಜನಪ್ರಿಯ ಶಾಸಕ ಹೆಚ್ ವಿ.ವೆಂಕಟೇಶ್ ಮತ್ತು ಮಾಜಿ ಸಚಿವ ವೆಂಕಟರಮಣಪ್ಪ ರವರುಗಳ ನೇತೃತ್ವದಲ್ಲಿ ನಡೆದ ಚುನಾವಣಾ ಬಹಿರಂಗ ಪ್ರಚಾರ ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಬಿ.ಎನ್.ಚಂದ್ರಪ್ಪ ರವರು ಭಾಗವಹಿಸಿ, ಮಾತನಾಡಿದರು.

ಕ್ಷೇತ್ರದಲ್ಲಿನ ಅಭಿವೃದ್ಧಿ ಮತ್ತು ಕಾಂಗ್ರೆಸ್ ಸರ್ಕಾರದ ಜನಪರ ಗ್ಯಾರಂಟಿ ಯೋಜನೆಗಳ ಬಗ್ಗೆ ಮನೆ ಮನೆಗೆ ತಿಳಿಸುವಂತೆ ಚಂದ್ರಪ್ಪ ನವರು ಕರೆ ನೀಡಿದರು. ಶಾಸಕ ಹೆಚ್.ವಿ.ವೆಂಕಟೇಶ್ ಮಾತನಾಡಿ ಕಾರ್ಯಕರ್ತರೇ ಕಾಂಗ್ರೆಸ್ ಪಕ್ಷದ ಜೀವಾಳ. ಬೇರುಮಟ್ಟದಲ್ಲಿ ಕಾರ್ಯಕರ್ತರು ಕೆಲಸ ಮಾಡಿದರೆ ಪಕ್ಷಕ್ಕೆ ಎಂದಿಗೂ ಜಯ ದೊರೆಯುತ್ತದೆ. ಕಳೆದ ವಿಧಾನಸಭೆ ಚುನಾವಣೆಯಂತೆ ಈ ಬಾರಿಯೂ ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬ ಕಾರ್ಯಕರ್ತ ಪರಿಶ್ರಮಪಡಬೇಕಾಗಿದೆ. ನಾವೆಲ್ಲರೂ ಸೇರಿ ಪಕ್ಷಕ್ಕೆ ಯಶಸ್ಸು ತಂದುಕೊಡಬೇಕಾಗಿದೆ. ಇದೇ ನಮ್ಮ ಗುರಿ ಎಂದು ಕಾರ್ಯಕರ್ಯತರನ್ನು ಹುರದುಂಬಿಸಿದರು . ಈ ಸಂದರ್ಭದಲ್ಲಿ ದೆಹಲಿ ವಿಶೇಷ ಪ್ರತಿನಿಧಿಗಳು ಶಿರಾ ಶಾಸಕರಾದ ಟಿ.ಬಿ ಜಯಚಂದ್ರ ರವರು, ಮಾಜಿ ಸಚಿವರಾದ ಆಂಜನೇಯರವರು ಭಾಗವಹಿಸಿದ್ದರು.



**ಹೊಳಲ್ಕೆರೆ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಡಾ.ಬಿ.ಆರ್. ಆಂಬೇಡ್ಕರ್ ಜಯಂತಿಯನ್ನು ಬಾವಚಿತ್ರಕ್ಕೆ ಪೂಜೆ ಸಲ್ಲಿಸಿ ಆಚರಣೆ ಮಾಡಲಾಗಿತ್ತು. ಮಾಜಿ ಅಧ್ಯಕ್ಷ ಎಸ್.ವೇದಮೂರ್ತಿ, ಉಪಾಧ್ಯಕ್ಷ ಎ.ಚಿತ್ತಪ್ಪ, ಪತ್ರಕರ್ತ ಸುರೇಶ್, ನಾಗರಾಜ್ ಹದಡಿ, ಪತ್ರಿಕಾ ವಿತರಕರ ಸಂಘದ ಅಧ್ಯಕ್ಷ ತಿಪ್ಪೇರುದ್ರಪ್ಪ, ಕಾರ್ಯದರ್ಶಿ ಶಶಾಂಕ್ ಸೇರಿದಂತೆ ಮತ್ತೀತರರು ಇದ್ದರು.**

# ಶ್ರೀ ಲಕ್ಷ್ಮೀ ಕೊಲ್ಲಪುರದಮ್ಮ ದೇವಿ ಸಿಡಿ ಉತ್ಸವ

» **ಪರಶುರಾಂಪುರ**

ಗ್ರಾಮದ ಆರಾಧ್ಯ ದೇವತೆ ಶ್ರೀ ಕೊಲ್ಲಪುರದಮ್ಮ ಜಾತ್ರೋತ್ಸವ ಅಂಗವ ವಿವಿಧ ಧಾರ್ಮಿಕ ಕಾರ್ಯಗಳ ಜತೆಗೆ ಶನಿವಾರ ಮುಂಜಾನೇ ಸಿಡಿಮರವನ್ನ ನೀರಿನಿಂದ ಶುದ್ಧಗೊಳಿಸಿ , ದೇವಸ್ಥಾನದ ಸಮೀಪ ಆವರಣವನ್ನ ಅಲಂಕರಿಸಿ ಕಂಬಕ್ಕೆ ಜೋಡಿಸಲಾಯಿತು .

ಸಿಡಿ ಉತ್ಸವ ಜರುಗುವ ಮುನ್ನ ಕಂಬಕ್ಕೆ ಶಾಂತಗೊಳಿಸಲು ಗ್ರಾಮದ ಗೌಡರು ಒಪ್ಪತ್ತಿನಿಂದ ತಯಾರಿಸಿದ ಬಾನವನ್ನ ಹಲವು ಜನಪದ ಕಲಾ ಮೇಳಗಳೊಂದಿಗೆ ಮೆರಣಿಗೆಯಲ್ಲಿ ಕರೆತರಲಾಯಿತು .

ಈ ವೇಳೆ ದೇವಿಯ ದೇವಾಲಯವನ್ನ ಮೂರು ಸಾರಿ ಪ್ರದಕ್ಷಣೆ ಬಳಿಕ ಸಿಡಿಕಂಬದ ಬಳಿ ಬಾನವನ್ನ ಶ್ರದ್ಧಭಕ್ತಿಯಿಂದ ಪೂಜಿಸಿದ ನಂತರ ಸಿಡಿ ಉತ್ಸವಕ್ಕೆ ಚಾಲನೆ ನೀಡಿದರು. ಈ ವರ್ಷ ಬಸವರಜು,ಸಾಗರ,ರಾಜು(ಪ್ರದೀಪ),ಗುರುಸ್ವಾವಿ ು ಈ ನಲ್ಕು ಜನರು ಒಪ್ಪತ್ತಿನಿಂದ ಇದ್ದು ಸಿಡಿ ಆಡಿದರು.ಸಿಡಿ ಆಡುವ ವ್ಯಕ್ತಿಯನ್ನ ಸಿಡಿಮರಕ್ಕೆ ಬಟ್ಟೆಯಿಂದ ಕಟ್ಟಿ ಪ್ರದಕ್ಷಣೆ ಹಾಕಿಸುವ ವೇಳೆ ನೆರದಿದ್ದ ಭಕ್ತರು ಭಕ್ತಿ ಘೋಷಣೆ ಕೂಗುವುದರ ಮೂಲಕ ಸಿಡಿ ಉತ್ಸವ ಮುಕ್ತಾಯಗೊಂಡಿತು.

ಸಂದರ್ಭದಲ್ಲಿ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು, ಗ್ರಾಮದ ಹನ್ನೆರೆಡು ಕೈವಾಡಸ್ತರು,ಸ್ಥಳೀಯ ಜನಪ್ರತಿನಿಧಿಗಳು ಮತ್ತು ಭಕ್ತರು ಗ್ರಾಮಸ್ಥರು ಇದ್ದರು.



## ಫಾಸ್ಟ್ ನ್ಯೂಸ್

### ಶ್ರೀ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿ ಬ್ರಹ್ಮರಥೋತ್ಸವ



» **ದಾವಣಗೆರೆ**

ತಾಲ್ಲೂಕಿನ ಗೊಲ್ಲರಹಳ್ಳಿ ಗ್ರಾಮದಲ್ಲಿ ಶ್ರೀ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ವೆಂಕಟೇಶ್ವರ ಸ್ವಾಮಿಯ ಬ್ರಹ್ಮರಥೋತ್ಸವ ಏ.17 ರಂದು ಸಂಜೆ 4ಕ್ಕೆ ವೈಭವದಿಂದ ಜರುಗಲಿದೆ. ಏ.15ರಂದು ಸೋಮವಾರ ಸಂಜೆ 6ಕ್ಕೆ ಗಣಪತಿ ಕುಂಕುಮಾರ್ಚನೆ, ಪಂಚಾಮೃತ ಅಭಿಷೇಕ, ರಾತ್ರಿ 7.15ಕ್ಕೆ ಕಂಕಣ ಧಾರಣೆ, ಗಜೋತ್ಸವ, ಬನ್ನಿ ಪೂಜೆ ನಡೆಯಲಿವೆ. ಏ. 16ರಂದು ಸಂಜೆ 6ಕ್ಕೆ ಸರ್ಪೋತ್ಸವ ಪೂಜೆ, ಬನ್ನಿ ಪೂಜೆ ಹಾಗೂ ಗಂಗಾಪೂಜೆ ನಡೆಯಲಿವೆ. ಏ 17 ರಂದು ಬೆಳಿಗ್ಗೆ 11.15ಕ್ಕೆ ರಥಕ್ಕೆ ಕಳಸ ಪ್ರತಿಷ್ಠಾಪನೆ, ರಥಕ್ಕೆ ಅರಿಶಿನ ಸೇವೆ ಹಾಗೂ ಕುಂಕುಮ ಪೂಜೆ ನಡೆಯಲಿವೆ. ಬೆ.11-45 ಕ್ಕೆ ತಿರುಪತಿ ಮಾದರಿಯಲ್ಲಿ ಅನ್ನ ಸಂತರ್ಪಣೆ, ಸಂಜೆ 4ಕ್ಕೆ ಸ್ವಾಮಿ ರಥೋತ್ಸವ ನಡೆಯಲಿದೆ. ಏಪ್ರಿಲ್ 18 ರಂದು ಬೆಳಗ್ಗೆ ಓಕುಳಿ ಕಾರ್ಯಕ್ರಮ ಬನ್ನಿ ಪೂಜೆ ನಡೆಯಲಿದೆ ಎಂದು ಗೊಲ್ಲರಹಳ್ಳಿ ಗ್ರಾಮಸ್ಥರು ತಿಳಿಸಿದ್ದಾರೆ.

### ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಕಾಂಗ್ರೆಸ್ ಜಯಭೇರಿ

» **ಮೊದಲ ಪುಟದಿಂದ**

ಪ್ರತಿಯೊಂದು ಹಂತದಲ್ಲೂ ಸರ್ಕಾರಕ್ಕೆ ಸಹಕಾರ ನೀಡದೆ ಜನವಿರೋಧಿ ತೋರಣೆತಾಳಿದೆ ಎಂದು ಆರೋಪಿಸಿದರು. ಚಿತ್ರದುರ್ಗ ಕ್ಷೇತ್ರದ ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ)ಮಾತನಾಡಿ, ಸಂವಿಧಾನವನ್ನು ಬದಲಾಯಿಸುವ ದೃಷ್ಠಿ ಹೊಂದಿರುವ ಬಿಜೆಪಿಯನ್ನು ಸೋಲಿಸುವುದೇ ನಮ್ಮೆಲ್ಲರ ಗುರಿಯಾಗಬೇಕು ಎಂದರು. ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಮಾತನಾಡಿ, ಚುನಾವಣೆಯಲ್ಲಿ ಸೋತರು ಜಿಲ್ಲೆಯಲ್ಲಿ ವಾಸ್ತವ್ಯ ಮಾಡಿ ಪಕ್ಷ ಸಂಘಟನೆಯಲ್ಲಿ ತೊಡಗಿರುವೆ. ಇತ್ತೀಚೆಗೆ ಸಾರ್ವಜನಿಕ ಸಭೆಯಲ್ಲಿ ಬಿಜೆಪಿ ಅಭ್ಯರ್ಥಿ ಗೋವಿಂದಕಾರಜೋಳ ನಾನು ಗೆದ್ದರೆ ಪ್ರಧಾನಮಂತ್ರಿ ಪಕ್ಕ ಕುಳಿತುಕೊಳ್ಳುತ್ತೇನೆ, ಚಂದ್ರಪ್ಪ ಗೆದ್ದರೆ ವಿರೋಧ ಪಕ್ಷದ ಸಾಲಿನಲ್ಲಿ ಕುಳಿತುಕೊಳ್ಳುತ್ತಾರೆ. ಆದ್ದರಿಂದ ಜಿಲ್ಲೆಯ ಅಭಿವೃದ್ಧಿ ದೃಷ್ಠಿಯಿಂದ ಬಿಜೆಪಿ ಬೆಂಬಲಿಸುವಂತೆ ಮನವಿ ಮಾಡಿದ್ದಾರೆ. ಆದರೆ, ನನಗೆ ಜನರ ಬಳಿಯೇ ಸದಾ ಕುಳಿತುಕೊಳ್ಳುವ ಇಚ್ಚೆ ಇದೆ ಮತದಾರ ತೀರ್ಪು ನೀಡುವ ಮೊದಲೇ ಇಂತಹ ಮಾತುಗಳು ಅವರಿಗೆ ಶೋಭಿಸುವುದಿಲ್ಲವೆಂದು ಗೌರವಿಯುತವಾಗಿ ಹೇಳುತ್ತೇನೆಂದರು. ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ್ದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಇಂದಿನ ಪ್ರಚಾರ ಸಭೆಗೆ ನಿರೀಕ್ಷೆಗೂ ಮೀರಿ ಹೆಚ್ಚಿನ ಜನರು ಆಗಮಿಸಿದ್ದಾರೆ. ನಿಮ್ಮೆಲ್ಲರಲ್ಲೂ ಈ ಬಾರಿ ಚಂದ್ರಪ್ಪನವರನ್ನು ಗೆಲ್ಲಿಸಬೇಕೆಂಬ ಛಲಮೂಡಿದೆ, ಈಗಾಗಲೇ ಎರಡು ಹಂತದಲ್ಲಿ ಈ ಕ್ಷೇತ್ರದಲ್ಲಿ ಪ್ರಚಾರ ಕಾರ್ಯ ಕೈಗೊಳ್ಳಲಾಗಿದೆ. ಚಿತ್ರದುರ್ಗ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸುವ ಏಕೈಕ ವ್ಯಕ್ತಿ ಚಂದ್ರಪ್ಪ ಎಂದರು. ನಿವೃತ್ತ ಎಲ್‌ಐಸಿ ಅಧಿಕಾರಿ ಬಿ.ತಿಪ್ಪೇಸ್ವಾಮಿ, ಜೆಡಿಎಸ್ ಮುಖಂಡ ಎಚ್.ಸಮರ್ಥರಾಯ ಸೇರಿದಂತೆ ಹಲವಾರು ಜನರು ಕಾಂಗ್ರೆಸ್ ಸೇರ್ಪಡೆಯಾದರು. ವೇದಿಕೆಯಲ್ಲಿ ಜಿಲ್ಲಾ ಕೆಪಿಸಿಸಿ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಶಿವಣ್ಣ, ಮಾಜಿ ಶಾಸಕ ಸಾಲಿಂಗಯ್ಯ, ವಾಣಿಜ್ಯೋದ್ಯಮಿ ಎಸ್.ರುದ್ರಮುನಿಯಪ್ಪ, ಟಿ.ಪ್ರಭುದೇವ್, ಶಂಕರ್, ಬಾಬು, ಮಂಜುನಾಥ, ಪ್ರಕಾಶ್‌ಮೂರ್ತಿ, ಬಾಬುರೆಡ್ಡಿ, ರವಿಬಾಬು, ಗೀತಾನಂದಿನಿಗೌಡ, ಶಶಿಕಲಾ, ಸೋಮಗುದ್ದುರಂಗಸ್ವಾಮಿ, ಕೆ.ವೀರಭದ್ರಪ್ಪ, ಶಶಿಧರ, ರಮೇಶ್‌ಗೌಡ ಮುಂತಾದವರು ಉಪಸ್ಥಿತರಿದ್ದರು.



**ಹೊಳಲ್ಕೆರೆ ತಾಲೂಕು ರಾಷ್ಟ್ರೀಯ ಹಬ್ಬಗಳ ಸಮಿತಿಯಿಂದ ತಾಲೂಕು ಕಚೇರಿ ಆವರಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಬಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅದ್ದೂರಿಯಾಗಿ ಅಚರಣೆ ಮಾಡಲಾಗಿತ್ತು. ತಹಸೀಲ್ದಾರ್ ಬೀಬಿ ಪಾತೀಮ, ಸಮಾಜ ಕಲ್ಯಾಣಾಧಿಕಾರಿ ಕುಮಾರ್ ಸ್ವಾಮಿ, ಡಿ.ಎಸ್.ಪಾಂಡುರಂಗಸ್ವಾಮಿ ಸೇರಿದಂತೆ ಹಲವಾರು ದಲಿತ ಮುಖಂಡರು, ಅಧಿಕಾರಿಗಳು ಉಪಸ್ಥಿತರಿದ್ದರು.**



**ಹೊಳಲ್ಕೆರೆ ಮಾಜಿ ಸಚಿವ ಹೆಚ್.ಆಂಜನೇಯ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಅಂಗವಾಗಿ ಬಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅದ್ದೂರಿಯಾಗಿ ಆಚರಣೆ ಮಾಡಿದರು. ಹಲವಾರು ದಲಿತ ಮುಖಂಡರು ಪಾಲ್ಗೊಂಡಿದ್ದರು.**

## ಪ್ರಮುಖ ಸುದ್ದಿ

### ಕ್ಷೇತ್ರದೆಲ್ಲೆಡೆ ಕಾಂಗ್ರೆಸ್ ಪರವಾದ ಬಲವಾದ ಅಲೆ : ಶಾಸಕ ರಘುಮೂರ್ತಿ

# ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ನಿಶ್ಚಿತ

» **ಚಳ್ಳಕೆರೆ**

ರಾಜ್ಯ ಸರ್ಕಾರದ ಐದು ಪ್ರಮುಖ ಗ್ಯಾರಂಟಿಗಳು ಜನತೆಯ ಹಲವಾರು ಸಮಸ್ಯೆಗಳಿಗೆ ಆಸರೆಯಾಗಿವೆ. ವಿಶೇಷವಾಗಿ ಮಹಿಳಾ ಸಮುದಾಯ ಉಚಿತ ಬಸ್ ಪ್ರಯಾಣ, ಪ್ರತಿತಿಂಗಳು ದೊರೆಯುವ ಗೃಹಲಕ್ಷ್ಮಿ ಯೋಜನೆಯ ಹಣದಿಂದ ಸಂತೃಪ್ತರಾಗಿದ್ದಾರೆ. ಮಹಿಳೆಯ ವಿಶ್ವಾಸವನ್ನು ಗೆಲ್ಲುವಲ್ಲಿ ಕಾಂಗ್ರೆಸ್ ಪಕ್ಷ ಸಫಲವಾಗಿದ್ದು, ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಗೆಲುವು ಸಾಧಿಸುವುದು ನಿಶ್ಚಿತ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ಪರಶುರಾಮಪುರ ಹೋಬಳಿಯ ಟಿ.ಎನ್.ಕೋಟೆ, ಪಿ.ಮಹದೇವಪುರ, ಸಿದ್ದೇಶ್ವರದುರ್ಗ, ದೊಡ್ಡಚೆಲ್ಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿಅಭ್ಯರ್ಥಿಬಿ.ಎನ್.ಚಂದ್ರಪ್ಪಪರ ಮತಯಾಚನೆ ಮಾಡಿ ಮಾತನಾಡಿದರು. ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಈ ಭಾಗರ ಜನರಿಗೆ ಚಿರಪರಿಚಿತರು, ರಾಜ್ಯ ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ.





ವಿಶೇಷವಾಗಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಲವಾರು ಬಾರಿ ಪ್ರವಾಸ ಕೈಗೊಂಡು ಪಕ್ಷವನ್ನು ಸಂಘಟಿಸಿದ್ದಾರೆ. ಕಾಂಗ್ರೆಸ್ ಪಕ್ಷ ಅವರ ಸೇವೆಯನ್ನು ಗಮನಿಸಿ ಅವರಿಗೆ ಮತ್ತೊಮ್ಮೆ ಅವಕಾಶ ಮಾಡಿಕೊಟ್ಟಿದೆ. ಆದ್ದರಿಂದ ಮತದಾರರು ಬಿ.ಎನ್.ಚಂದ್ರಪ್ಪನವರಿಗೆ ಮತ ನೀಡುವಂತೆ ವಿನಂತಿಸಿದರು. ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ಪ್ರಭುದೇವ್, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ಚನ್ನಕೇಶವ, ಕೆಎಂಎಫ್‌ನಿರ್ದೇಶಕ ಸಿ.ವೀರಭದ್ರಬಾಬು, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಗದ್ದಿಗೆತಿಪ್ಪೇಸ್ವಾಮಿ, ಸಿ.ಟಿ.ಶ್ರೀನಿವಾಸ್, ಡಿ.ಕೆ.ಕಾಟಯ್ಯ, ರೆಡ್ಡಿಹಳ್ಳಿಶಿವಣ್ಣ, ಎಚ್. ಹನುಮಂತಪ್ಪ, ಎನ್.ಮಂಜುನಾಥ, ಬಿ.ಟಿ.ರಮೇಶ್‌ಗೌಡ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಬಿಜೆಪಿ ಗೆಲುವಿಗೆ ಪೂರಕ ವಾತಾವಣ: ಬಿಎಸ್‌ವೈ



» ಚಳ್ಳಕೆರೆ
ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಪರವಾಗಿ ಬಲವಾದ ಅಲೆ ಇದೆ. ವಿಶೇಷವಾಗಿ ರಾಜ್ಯದ ದಲಿತ ಸಮೂಹದ ಹಿರಿಯ ನಾಯಕ, ಸಚಿವರಾಗಿ ಸೇವೆ ಸಲ್ಲಿಸಿದ ಅಪಾರವಾದ ಅನುಭವ ಹೊಂದಿರುವ ಕ್ರಿಯಾಶೀಲ ವ್ಯಕ್ತಿ ಗೋವಿಂದಕಾರಜೋಳರವರನ್ನು ಅಭ್ಯರ್ಥಿಯಾಗಿ ಮಾಡಿದ್ದೇವೆ. ಈ ಕ್ಷೇತ್ರದಲ್ಲಿ ಅವರ ಗೆಲುವು ಶತಸಿದ್ದವೆಂದು ಮಾಜಿ ಮುಖ್ಯಮಂತ್ರಿ, ಬಿಜೆಪಿ ಹಿರಿಯ ದುರೀಣ ಬಿ.ಎಸ್. ಯಡಿಯೂರಪ್ಪ ತಿಳಿಸಿದರು. ಅವರು, ಖಾಸಗಿ ಕಲ್ಯಾಣಮಂಟಪದಲ್ಲಿ ಕಾರ್ಯಕರ್ತರ ಸಭೆಯ ನಂತರ ಮಾಧ್ಯಮದವರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಮೋದಲನೆ ಹಂತದ ಮತದಾನ ಏ.26ರಂದು ನಡೆಯಲಿದ್ದು, 14 ಕ್ಷೇತ್ರಗಳಲ್ಲಿ ಬಹುತೇಕ ಎಲ್ಲೆಡೆ ಬಿಜೆಪಿ ಗೆಲುವು ಸಾಧಿಸಲಿದೆ. ಕಾಂಗ್ರೆಸ್ ಪಕ್ಷದ ಸುಳ್ಳು ಆರೋಪಗಳಿಗೆ ಜನತೆ ಈಗಾಗಲೇ ಬೇಸರಗೊಂಡಿದ್ದಾರೆ. ಜನರ ಸಂಕಲ್ಪ ಬಿಜೆಪಿಯನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವುದಾಗಿದೆ. ಪ್ರಧಾನಮಂತ್ರಿ ನರೇಂದ್ರಮೋದಿಯವರ ಜನಪರ ಯೋಜನೆಗಳಿಗೆ ಮತದಾರರು ಮಾರುಹೋಗಿದ್ದಾರೆ. ಕಾಂಗ್ರೆಸ್ ಪಕ್ಷದಲ್ಲಿ ರಾಷ್ಟ್ರವನ್ನು ಮುನ್ನಡೆಸುವವರು ಯಾರೂ ಇಲ್ಲವೆಂಬ ಭಾವನೆ ಮತದಾರರಲ್ಲಿದೆ. ನರೇಂದ್ರಮೋದಿಯವರ ಆಡಳಿತದಲ್ಲಿ ಯಾವುದೇ ಕಪ್ಪುಚುಕ್ಕೆ ಇಲ್ಲ. ಆದ್ದರಿಂದ ಬಿಜೆಪಿ ಗೆಲುವು ಗ್ಯಾರಂಟಿ ಎಂದರು. ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರುಳಿ, ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ಲಿಂಗಮೂರ್ತಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಎನ್.ಓಬಳೇಶ್ ಮುಂತಾದವರು ಇದ್ದರು.

### ಸಮಾನತೆಯ ಹರಿಹಾರ ಅಂಬೇಡ್ಕರ್: ಚಂದ್ರಪ್ಪ



» ಚಿತ್ರದುರ್ಗ
ಸಮಾನತೆಯ ಹರಿಕಾರ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 133 ನೇ ಜನ್ಮ ದಿನಾಚರಣೆ ಅಂಗವಾಗಿ ಇಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ಬಿ.ಎನ್. ಚಂದ್ರಪ್ಪ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಈ ವೇಳೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ತಾಜ್ ಪೀರ್, ಜಿಲ್ಲಾ ಕಾಂಗ್ರೆಸ್ ಕಾರ್ಯಧ್ಯಕ್ಷರಾದ ಹಾಲೇಶ್, ಕಾಂಗ್ರೆಸ್ ಪಕ್ಷದ ಮುಖಂಡರಾದ ಆರಾಧ್ಯ , ರವಿಕುಮಾರ್ , ಶರಣಪ್ಪ , ಚಿದಾನಂದ ಮೂರ್ತಿ, ರವೀಂದ್ರ , ನಾಗರಾಜ್ ಸೇರಿಸಂತೆ ಅನೇಕರು ಉಪಸ್ಥಿತರಿದ್ದರು.

### ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ



» ಚಿತ್ರದುರ್ಗ
ಚಿತ್ರದುರ್ಗನಗರದತಾಲ್ಲೂಕುಆರೋಗ್ಯಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಆಚರಿಸಲಾಯಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣು ಪ್ರಸಾದ್ ಅವರು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು



**ಹೊಳಲ್ಕೆರೆ ತಾಲೂಕಿನ ಮದ್ದೇರು ಗ್ರಾಮದಲ್ಲಿ ವಿವಿಧ ದಲಿತ ಸಂಘಟನೆಗಳು ಡಾ.ಬಿ.ಆರ್. ಆಂಬೇಡ್ಕರ್ ಜಯಂತಿಯನ್ನು ಆಚರಣೆ ಮಾಡಿದರು. ದಲಿತ ಮುಖಂಡ ನವೀನ್ ಸೇರಿದಂತೆ ಗ್ರಾಮಸ್ಥರು ಪಾಲ್ಗೊಂಡಿದ್ದರು.**

# ಸರ್ಕಾರ ಐದು ಗ್ಯಾರಂಟಿಗಳ ಅನುಷ್ಠಾನದಿಂದ ಕಾಂಗ್ರೆಸ್‌ಗೆಲುವು ಗ್ಯಾರಂಟಿ: ಸಚಿವ ಜಾರಕಿಹೊಳಿ

» ಚಳ್ಳಕೆರೆ
ಕರ್ನಾಟಕದಲ್ಲಿ ಎರಡು ಹಂತದಲ್ಲಿ ಲೋಕಸಭಾ ಚುನಾವಣೆ ನಡೆಯಲಿದ್ದು, ಕಳೆದ ವರ್ಷದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೀಡಿದ ಗ್ಯಾರಂಟಿಗಳ ಗ್ಯಾರಂಟಿ ಅನುಷ್ಠಾನದಿಂದ ಲೋಕಸಭಾ ಚುನಾವಣೆಯಲ್ಲೂ ಅತಿಹೆಚ್ಚು ಸ್ಥಾನಗಳಿಸುವುದು ನಮಗೆ ಗ್ಯಾರಂಟಿಯಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್‌ಜಾರಕಿಹೊಳಿ ತಿಳಿಸಿದರು.

ಅವರು, ನಗರದ ಗುರುರಾಘವೇಂದ್ರ ಕಲ್ಯಾಣಮಂಟಪದಲ್ಲಿ ಕಾಂಗ್ರೆಸ್ ಪಕ್ಷ ಆಯೋಜಿಸಿದ್ದ ಲೋಕಸಭಾ ಚುನಾವಣೆಯ ಪ್ರಚಾರ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು. ರಾಜ್ಯದಲ್ಲಿ ಪ್ರಸ್ತುತ




ಸರ್ಕಾರ ಶಿಕ್ಷಣ ಮತ್ತು ವಸತಿ ಸೌಕರ್ಯಕ್ಕೆ ಆದ್ಯತೆ ನೀಡುತ್ತಿದೆ, ಬಿಜೆಪಿಯ ನಾಲ್ಕು ವರ್ಷಗಳ ಆಡಳಿತದಲ್ಲಿ ಒಂದು ಶಾಲೆ ನಿರ್ಮಾಣವಾಗಲಿಲ್ಲ, ಇಂದು ವಸತಿಯೂ ನಿರ್ಮಾಣವಾಗಲಿಲ್ಲ. ಮುಖ್ಯಮಂತ್ರಿ ಸಿದ್ಧರಾಮಯ್ಯ 13 ಲಕ್ಷ ಮನೆ ನಿರ್ಮಾಣದ ಗುರಿ ನೀಡಿದ್ದು ಆಪೈಕಿ 5 ಲಕ್ಷ ಮನೆಗಳನ್ನು ವಿತರಣೆ ಮಾಡಲಾಗಿದೆ. 3 ಲಕ್ಷ ಮನೆಗಳು ನಿರ್ಮಾಣದ ಹಂತದಲ್ಲಿವೆ. ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮುಖಂಡರು ಪ್ರತಿ ಮನೆ, ಮತದಾರರ ಭೇಟಿಯಾಗಬೇಕು. ಈ ಬಾರಿ ಕಾಂಗ್ರೆಸ್‌ಗೆ ಮತ ನೀಡಬೇ ಕೆಂದು ವಿನಂತಿ ಮಾಡಬೇಕಿದೆ. ಸಾರ್ವಜನಿ ಕರಲ್ಲಿ ಈಗಾಗಲೇ ಪ್ರಸ್ತುತ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಹೆಚ್ಚು ಆತ್ಮವಿಶ್ವಾಸವಿದ್ದು, ಕಾಂಗ್ರೆಸ್ ಪಕ್ಷವನ್ನು ಆಶೀರ್ವಾದಿಸಲು ಅವರು ಹಿಂದೆ, ಮುಂದೆ ನೋಡಲ್ಲ, ಇಂದಿನ ಜನಸ್ತೋಮವನ್ನು ನೋಡಿದರೆ ಅಭ್ಯರ್ಥಿ ಚಂದ್ರಪ್ಪ ಈಗಾಗಲೇ ಗೆಲುವಿನತ್ತ ಹೆಜ್ಜೆ ಇಟ್ಟಿದ್ಧಾರೆಂದರು.

# ಭಾರತ ಭೂಪಟದಲ್ಲಿ ಮತದಾನ ಜಾಗೃತಿ

» ದಾವಣಗೆರೆ
ಯುವ ಜನರು ಮತದಾನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಬಲಿಷ್ಠ ಭಾರತ ಕಟ್ಟುವಲ್ಲಿ ತಮ್ಮ ಸುತ್ತ-ಮುತ್ತಲಿನ ಜನರಿಗೂ ಮತದಾನದ ಮಹತ್ವ ತಿಳಿಸಿಕೊಡಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ವೆಂಕಟೇಶ.ಎಂ.ವಿ ತಿಳಿಸಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಿವಿಧ ಇಲಾಖೆ ಮತ್ತು ಸಿದ್ದಗಂಗಾ ಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಮತದಾನ ಜಾಗೃತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ನಮ್ಮ ಭಾರತ ದೇಶ, ವಿಶ್ವದಲ್ಲೇ ದೊಡ್ಡ ಪ್ರಜಾಪ್ರಭುತ್ವ ಹೊಂದಿರುವ ದೇಶವಾಗಿದೆ. ಮತದಾನ ಪ್ರತಿಯೊಬ್ಬರ ಹಕ್ಕು, ಇದನ್ನು ಚಲಾಯಿಸುವುದು ನಮ್ಮ ಕರ್ತವ್ಯ, ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ, ನನ್ನ ಮತ ಮಾರಾಟಕ್ಕಿಲ್ಲ, ಮುಕ್ತ, ನ್ಯಾಯಸಮ್ಮತ ಹಾಗೂ ಶಾಂತಿಯುತ ಚುನಾವಣೆಗೆ ಸಹಕರಿಸಿ, ನಮ್ಮ ಸಂವಿಧಾನ ನೀಡಿರುವಂತಹ ಹಕ್ಕನ್ನು ನಾವು ಪ್ರಬಲವಾಗಿ ಬಳಸಿಕೊಂಡರೆ ನಮಗೆ ಉಜ್ವಲ ಭವಿಷ್ಯವನ್ನು ನಮ್ಮ ದೇಶಕ್ಕೆ ನೀಡಬಹುದು ಎಂದರು.

ಚುನಾವಣೆ ಪ್ರಜಾಪ್ರಭುತ್ವದ ಭದ್ರ ಬುನಾದಿ, ಯಾವುದೇ ಆಸೆ ಆಮಿಷಗಳಿಗೆ ತುತ್ತಾಗದೆ ನಿರ್ಭೀತಿಯಿಂದ ಮತ ಚಲಾಯಿಸಿ, ಮತದಾರರ ಪಟ್ಟಿಯಲ್ಲಿ ಹೆಸರಿರುವುದನ್ನು ಖಚಿತ ಪಡಿಸಿಕೊಂಡು ಮತದಾನ ಮಾಡಿ ಮೇ 7 ರಂದು ಕಡ್ಡಾಯವಾಗಿ ಮತದಾನ ಮಾಡಿ ಎಂದರು. ಕ್ಷೇತ್ರದಲ್ಲಿ 1946 ಮತಗಟ್ಟೆಗಳಿವೆ. ಜಿಲ್ಲೆಯಲ್ಲಿ 17,06,169ಕ್ಕೂಹೆಚ್ಚುಮತದಾರರಿದ್ದಾರೆ.ಅದರಲ್ಲಿ 50,000 ಕ್ಕಿಂತ ಹೆಚ್ಚು ಯುವ ಮತದಾರರಿದ್ದಾರೆ. ಈ ಬಾರಿಯ ಮತದಾರ ಚೀಟಿಯಲ್ಲಿ ಕ್ಯೂಆರ್ ಕೋಡ್ ನಮೂದಿಸಲಾಗಿದೆ. ಇದರಿಂದ ನಿಮ್ಮ ಮತಗಟ್ಟೆ ಇರುವ ಸ್ಥಳ, ಮತಗಟ್ಟೆ ಸಂಖ್ಯೆಯನ್ನು ತಿಳಿಸುತ್ತದೆ. ನಂತರ ಪ್ರತಿಜ್ಞಾವಿಧಿ ಭೋದಿಸಿದರು. ಯುವ ಮತದಾರರಿಂದ ಕೇಕ್ ಕತ್ತರಿಸಿ ಸಿಹಿ ಹಂಚಿಸಿದರು.ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಅಧ್ಯಕ್ಷರಾದ ಸುರೇಶ.ಬಿ.ಇಟ್ನಾಳ್ ಮಾತನಾಡಿ,




ಶೇ.85 ರಷ್ಟು ಮತದಾನ ಮಾಡಿಸುವುದು ನಮ್ಮ ಗುರಿಯಾಗಿದೆ. ಚುನಾವಣೆಯಲ್ಲಿ ಹೆಚ್ಚು ಮತದಾನವಾಗುವುದರಿಂದ ಅತ್ಯುತ್ತಮರ ಆಯ್ಕೆ ಸಾಧ್ಯ, ಈ ದಿಸೆಯಲ್ಲಿ ಸಂವಿಧಾನಾತ್ಮಕ ಹಕ್ಕು, ಮತದಾನ ಕಾರ್ಯದಲ್ಲಿ ತಪ್ಪದೇ ಪಾಲ್ಗೊಳಬೇಕು. 18 ವರ್ಷ ತುಂಬಿದ ಅರ್ಹ ಮತದಾರರು ಚುನಾವಣಾ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಮತದಾನ ಮಾಡುವ ಮೂಲಕ ದೇಶದ ಕರ್ತವ್ಯ ನಿಭಾಯಿಸಬೇಕು. ಯುವ ಜನಾಂಗ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರ ನಿರ್ಮಾಣದಲ್ಲಿ ಮುಂದಾಗಿ ಸುತ್ತ-ಮುತ್ತಲಿನ ಜನರಿಗೂ ಮತದಾನದ ಮಹತ್ವ ತಿಳಿಸಿಕೊಡಬೇಕು ಎಂದರು.

ಯಾವುದೇ ಆಸೆ-ಆಮಿಷಗಳಿಗೆ ಮತವನ್ನು ಮಾರಾಟ ಮಾಡಿದರೆ, ನಮ್ಮತನವನ್ನು ಮಾರಾಟ ಮಾಡಿದಂತಾಗುತ್ತದೆ ಎಂದು ಎಚ್ಚರಿಸಿದರು.

ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ನಾಗರಾಜ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಬೇಬಿ ಸುನೀತಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಿಕಿ ಜಯಲಕ್ಷ್ಮೀಬಾಯಿ ಹಾಗೂ ಸಿದ್ದಗಂಗಾ ಸಂಸ್ಥೆ ಜಯಂತ್, ಕಾಲೇಜಿನ ವಿದ್ಯಾರ್ಥಿಗಳು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸಿದ್ದಗಂಗಾ ಶಾಲೆ ವಿದ್ಯಾರ್ಥಿಗಳು ಭಾರತ ಭೂಪಟ ಆಕಾರದಲ್ಲಿ ನಿಲ್ಲುವ ಮೂಲಕ ಮೇ 7 ರಂದು ಮತದಾನ ಮಾಡಿ ಎಂಬ ಸಂದೇಶ ಗಮನ ಸೆಳೆಯಿತು.

## ಶಾಂತಿ ಹಾಗೂ ಪ್ರೀತಿ ಸಂದೇಶ ಸಾರಿದ ದೇವರದಾಸಿಮಯ್ಯ: ಎಡಿಸಿ



» ಚಿತ್ರದುರ್ಗ
ಶಾಂತಿ ಹಾಗೂ ಪ್ರೀತಿಯ ಸಂದೇಶ ಸಾರಿದ ದೇವರ ದಾಸಿಮಯ್ಯ ನಮ್ಮೆಲ್ಲರ ಬದುಕಿಗೆ ಮಾದರಿಯಾಗಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು. ಲೋಕಸಭಾ ಚುನಾವಣೆ ಮಾದರಿ ನೀತಿ ಸಂಹಿತೆ ಹಿನ್ನಲೆಯಲ್ಲಿ ನಗರದ ತ.ರಾ.ಸು ರಂಗಮಂದಿರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿಯಲ್ಲಿ ಶನಿವಾರ ಸರಳವಾಗಿ ಆಯೋಜಿಸಲಾದ ಜಯಂತಿ ಆಚರಣೆಯಲ್ಲಿ ದೇವರದಾಸಿಮಯ್ಯನವರ ಭಾವಚಿತ್ರಕ್ಕೆ ಪುಷ್ಪ ನಮನ ಸಮರ್ಪಿಸಿ ಅವರು ಮಾತನಾಡಿದರು. ವಚನಗಳಿಂದ ಸಮಾಜ ಅಂಕುಡೊಂಕು ತಿದ್ದಿದ ದೇವರದಾಸಿಮಯ್ಯ ನೇರ ನಿಷ್ಠುರಿಯಾಗಿದ್ದರು. ಸಮಾಜದ ಪ್ರತಿಯೊಬ್ಬರ ಒಳಿತು ಬಯಸಿದರು. ನಡೆ ನುಡಿ ಒಂದಾಗಿ ಬಾಳಿದ ದೇವರದಾಸಿಮಯ್ಯನವರು ಬಸವಣ್ಣನಾದಿಯಾಗಿ ಎಲ್ಲಾ ಶಿವ ಶರಣರಿಗೆ ಮಾದರಿಯಾಗಿದ್ದರು. ದಾಸಿಮಯ್ಯ ನವರನ್ನು ಆದ್ಯ ವಚನಕಾರ ಎಂದು ಎಲ್ಲಾ ಶಿವಶರಣರು ಭಾವಿಸಿದ್ದರು. ನೇಕಾರ ವೃತ್ತಿ ಮಾಡುತ್ತಾ ಜನರಿಗೆ ಮಾನ ಮುಚ್ಚುವ ವಸ್ತ್ರ ತಯಾರಿಸುವ ಪವಿತ್ರ ಕಾಯಕ ದಾಸಿಮಯ್ಯನವರದು. ಬಾಹ್ಯವಾಗಿ ಬಟ್ಟೆ ತೊಟ್ಟು ಆಂತರ್ಯದಲ್ಲಿ ಮೂಢನಂಬಿಕೆ ಇರಬಾರದು ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಅವರು ಸ್ವಾಗತಿಸಿ, ಪ್ರಸ್ತಾವಿಕವಾಗಿ ಮಾತನಾಡಿದರು. ರಂಗನಿರ್ದೇಶಕ ಕೆ.ಪಿ.ಎಂ.ಗಣೇಶಯ್ಯ ನಾಡಗೀತೆ, ದೇವರ ದಾಸಿಮಯ್ಯನವರ ವಚನ ಹಾಡುವುದರೊಂದಿಗೆ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ನೇಕಾರರ ಒಕ್ಕೂಟದ ಅಧ್ಯಕ್ಷ ಗೋವಿಂದಪ್ಪ, ಕಾರ್ಯದರ್ಶಿ ಸುರೇಶ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್. ಎಂ.ಕಾಳೇಸಿಂಘೆ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ್ ಸೇರಿದಂತೆ ನೇಕಾರ ಸಮಾಜದ ಮುಖಂಡರು ಹಾಗೂ ವಿವಿಧ ಇಲಾಖೆ ನೌಕರರು ಇದ್ದರು.

## ಪ್ರಮುಖ ಸುದ್ದಿ

### ಭಾರತ ರತ್ನ, ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ 133ನೇ ಜಯಂತಿ ಆಚರಣೆ

# ಮತದಾನದ ಹಕ್ಕು ಕಲ್ಪಿಸಿದ ಮಹಾತ್ಮ ಅಂಬೇಡ್ಕರ್

» ಚಿತ್ರದುರ್ಗ
ಜನಾಂಗ, ಜಾತಿ, ಸಮುದಾಯ ಹಾಗೂ ಅಂತಸ್ತು ಭೇದವಿಲ್ಲದೆ ದೇಶದ ಎಲ್ಲಾ ನಾಗರಿಕರಿಗೂ ಸಂವಿಧಾನದ ಮೂಲಕ ಮತದಾನದ ಹಕ್ಕು ಕಲ್ಪಿಸಿದ ಮಹಾತ್ಮ ಡಾ.ಬಿ.ಆರ್.ಅಂಬೇಡ್ಕರ್ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿ.ಪಂ ಸಭಾಂಗಣದಲ್ಲಿ ಭಾನು ವಾರ ಆಯೋಜಿಸಲಾದ ಡಾ.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.



ಅಂಬೇಡ್ಕರ್ ಜ್ಞಾನದ ಸಂಕೇತ, ಅಂಬೇಡ್ಕರ್ ಎನ್ನುವ ಜ್ಞಾನ ದೀವಿಗೆಯಿಂದ ಬಹಳಷ್ಟು ಜನರ ಜೀವನ ಬೆಳಕು ಕಂಡಿದೆ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಮುಂದೆ ಸಾಗಬೇಕು. ಪ್ರಜಾಪ್ರಭುತ್ವದ ಮೇಲೆ ಅಪಾರ ನಂಬಿಕೆ ಹೊಂದಿದ್ದ ಅಂಬೇಡ್ಕರ್ ದೇಶದ ಎಲ್ಲ ಅರ್ಹ ವಯಸ್ಸಿನ ನಾಗರೀಕರಿಗೆ ಮತದಾನದ ಹಕ್ಕು ಕಲ್ಪಿಸಿದ್ದಾರೆ. ಇದರ ಮಹತ್ವ ಅರಿತು ಲೋಕಸಭಾ ಚುನಾವಣೆಗೆ ಬರುವ ಏಪ್ರಿಲ್ 26ರಂದು ನಡೆಯುವ ಮತದಾನದಲ್ಲಿ ಪ್ರತಿಯೊಬ್ಬರು ತಪ್ಪದೇ ಕಡ್ಡಾಯವಾಗಿ ಮತ ಚಲಾಯಿಸಬೇಕು. ಹಾಗೆಯೇ ತಮ್ಮ ಸುತ್ತ ಮುತ್ತಲಿನ ಜನರನ್ನು ಮತದಾನ ಮಾಡಲು ಪ್ರೇರೇಪಿಸಬೇಕು. ಮತದಾನ ಮೂಲಕ ಪ್ರಜಾಪ್ರಭುತ್ವದ ಬೇರುಗಳನ್ನು ಗಟ್ಟಿಗೊಳಿಸಬೇಕು. ಜವಾಬ್ದಾರಿಯುತ ಸರ್ಕಾರನ್ನು ಆಯ್ಕೆ ಮಾಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಚಿತ್ರದುರ್ಗ ನಗರದ ಬಾಲಕರ ಸರ್ಕಾರಿ ಪಿಯು ಕಾಲೇಜು ಉಪನ್ಯಾಸಕ ಡಾ.ಬಿ.ಎಂ. ಗುರುನಾಥ್ ಮಾತನಾಡಿ, ಬಡವರ ನಿಜವಾದ ಭಾಗ್ಯವಿಧಾತ ಡಾ.ಬಿ.ಆರ್. ಅಂಬೇಡ್ಕರ್. ಇವರು ನಮ್ಮೆಲ್ಲರ ಬದುಕಿನ ಶಾಸನ ಬರೆದು, ಬಡವರ ನಗುವಿನ ಹಿಂದಿರುವ ಶಕ್ತಿಯಾಗಿದ್ದಾರೆ. ಇಂದಿಗೂ ಅನೇಕ ಸಮುದಾಯಗಳು ಜಾತಿ ವ್ಯವಸ್ಥೆಯ ಬೇಗುದಿಯಲ್ಲಿ ಬೆಂದು ನಿಟ್ಟುಸಿರು ಬಿಡುತ್ತಿವೆ. ಅಂಬೇಡ್ಕರ್ ನಂತರ ಅವರಷ್ಟೇ ಕಾಳಜಿಯಿಂದ ದೀನ ದಲಿತರ ಬಗ್ಗೆ ಯೋಚಿಸುವ ನಾಯಕ ದೇಶದಲ್ಲಿ ಹುಟ್ಟಿ ಬಂದಿಲ್ಲ ಎಂದರು.

ಬುದ್ದ, ಬಸವ, ಶಾಹು ಮಹಾರಾಜ್, ಅಂಬೇಡ್ಕರ್, ಪರಿಯಾರ್, ಪುಲೆ, ಕುದ್ಮಲ್ ರಂಗರಾವ್, ಅವರಂತಹ ಮಹನೀಯರ ಚಿಂತನೆ ಫಲವಾಗಿ ಜಾತಿ ವ್ಯವಸ್ಥೆಯ ಅಸಮಾನತೆ ಪ್ರಮಾಣ ಕಡಿಮೆಯಾಗಿ, ಸಮಾಜದಲ್ಲಿ ಸಮಾನತೆ ಮೂಡುತ್ತಿದೆ. ಡಾ.ಅಂಬೇಡ್ಕರ್ ಜಾತಿ ಎಂಬ ರಾಕ್ಷಸನನ್ನು ಹೊಡೆದ ಹಾಕುವ ಪ್ರಯತ್ನ ಮಾಡಿದರು. ಪೂನಾ ಪ್ಯಾಕ್ಟ್ ಮೂಲಕ ದೇಶದ ದಲಿತರನ್ನು ಶತಮಾನಗಳ ಕೂಪದಿಂದ ವಿಮೋಚನೆಗೊಳಿಸಿದರು. ಕಲಾರಾಮ್ ಮಂದಿರ ಪ್ರವೇಶ, ಮಹಾಡ್ ಕೆರೆ ಸತ್ಯಾಗ್ರಹ, ದುಂಡು ಮೇಜಿನ ಸಮ್ಮೇಳದಲ್ಲಿ ಭಾಗವಹಿಸುವ ಮೂಲಕ ಅಂಬೇಡ್ಕರ್ ದಲಿತರ ಹಕ್ಕುಗಳಿಗೆ ಸತತವಾಗಿ ಹೋರಾಟ ನಡೆಸಿದರು. ಪುತ್ರ ರಾಜರತ್ನ ಮರಣದ ಶೋಕದ ಸಂದರ್ಭದಲ್ಲಿ ಸಹ ಅಂಬೇಡ್ಕರ್ ದುಂಡು ಮೇಜಿನ ಸಮ್ಮೇಳನದಲ್ಲಿ ಭಾಗವಹಿಸಿ ದೀನ ದಲಿತರ ಪರವಾಗಿ ವಾದ ಮಂಡಿಸಿದರು ಎಂದು ಉಪನ್ಯಾಸಕ ಡಾ.ಬಿ.ಎಂ.ಗುರುನಾಥ್ ಹೇಳಿದರು.

ದೇಶದಲ್ಲಿ ಸ್ವಾತಂತ್ರಕ್ಕೂ ಮೊದಲು ಬಂಡವಾಳ ಶಾಹಿಗಳು, ಬಿ.ಎ ಹಾಗೂ ಎಂ.ಎ ಪದವಿಧರರು ಹಾಗೂ ತೆರಿಗೆ ಕಟ್ಟುವವರಿಗೆ ಮಾತ್ರ ಮತದಾನ ಹಕ್ಕು ಇತ್ತು. ಇದನ್ನು ಬದಲಾಯಿಸಿ ಸ್ವಾತಂತ್ರ್ಯದ ನಂತರದಲ್ಲಿ 21 ವರ್ಷ ತುಂಬಿದ ಪ್ರತಿಯೊಬ್ಬರಿಗೂ ಯಾವುದೇ ಜಾತಿ, ಧರ್ಮ, ಅಂತಸ್ತುಗಳ ಬೇಧವಿಲ್ಲದೆ ಮತದಾನ ಹಕ್ಕನ್ನು ಡಾ.ಬಿ.ಆರ್. ಅಂಬೇಡ್ಕರ್ ಕಲ್ಪಿಸಿದರು. ಮತದ ಮೂಲಕ ಆಯ್ಕೆ ಮಾಡುವ ನಾಯಕ ಹೇಗಿರಬೇಕು ಎಂಬ ಕಲ್ಪನೆಯನ್ನು ಸಹ ನೀಡಿದರು ಎಂದು ಉಪನ್ಯಾಸಕ ಡಾ.ಬಿ.ಎಂ. ಗುರುನಾಥ್ ಹೇಳಿದರು.

ಮುಂದಿನ ವರ್ಷ ಅದ್ದೂರಿ ಜಯಂತಿ ಆಚರಣೆ: ಲೋಕಸಭೆ ಚುನಾವಣೆ ಮಾದರಿ ನೀತಿ ಸಂಹಿತೆಯಲ್ಲಿ ಅಂಬೇಡ್ಕರ್ ಜಯಂತಿಯನ್ನು ಈ ಬಾರಿ ಅತ್ಯಂತ ಸರಳವಾಗಿ ಆಚರಿಸಲಾಗುತ್ತಿದೆ. ಮುಂದಿನ ವರ್ಷ ಅದ್ದೂರಿ ಹಾಗೂ ವಿಜೃಂಭಣೆಯಿಂದ ಅಂಬೇಡ್ಕರ್ ಜಯಂತಿಯನ್ನು ಆಚರಿಸುವ ಭರವಸೆಯನ್ನು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಅವರು ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಚುನಾವಣೆ ಕಾರ್ಯನಿಮಿತ್ತ ವೇದಿಕೆಯಿಂದ ಬೇಗನೆ ನಿರ್ಗಮಿಸಿದರು. ಈ ವೇಳೆ ನೆರೆದವರಿಗೆ ಅಂಬೇಡ್ಕರ್ ಜಯಂತಿಯ ಶುಭಾಶಯ ಕೋರಿದರು.

## ಫಾಸ್ಟ್ ನ್ಯೂಸ್

### ಶ್ರೀರೇಣುಕಾದೇವಿ ಪದವಿಪೂರ್ವ ಕಾಲೇಜಿಗೆ ಶೇ.70ರಷ್ಟು ಫಲಿತಾಂಶ

» ಚಳ್ಳಕೆರೆ

ತಾಲ್ಲೂಕಿನ ಗಡಿಭಾಗದಲ್ಲಿರುವ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರೇಣುಕಾಪುರ ಶ್ರೀರೇಣುಕಾದೇವಿ ಸ್ವತಂತ್ರ ಪದವಿಪೂರ್ವ ಕಾಲೇಜು ದ್ವಿತೀಯ ಪಿಯುಸಿಯಲ್ಲಿ ಶೇ.70ರ ಫಲಿತಾಂಶ ದಾಖಲಿಸಿದೆ ಎಂದು ಕಾಲೇಜು ಆಡಳಿತಾಧಿಕಾರಿ ಎಸ್.ಸಾಗರ್ ತಿಳಿಸಿದ್ದಾರೆ.






ಅವರು ಈ ಬಗ್ಗೆ ಮಾಹಿತಿ ನೀಡಿ, ಕಲಾವಿಭಾಗದಲ್ಲಿ 39 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಆಪೈಕಿ 22 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ 24 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು,22 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಒಟ್ಟಾರೆ ಈ ಬಾರಿಯ ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶ ಉತ್ತಮವಾಗಿದ್ದು ಎಲ್ಲೆಡೆಯಿಂದ ಪ್ರಶಂಸೆ ವ್ಯಕ್ತವಾಗುತ್ತಿದೆ ಎಂದು ತಿಳಿಸಿದ್ದಾರೆ. ಕಾಲೇಜಿನ ಕಲಾವಿಭಾಗದ ವಿದ್ಯಾರ್ಥಿಗಳಾದ ಜಿ.ಮಂಜುನಾಥ-544, ಎನ್.ಜಯಲಕ್ಷ್ಮಿ-540, ದೀಪಿಕಾ-456, ನಯನ-445 ಅಂಕಗಳಿಸಿದ್ದರೆ, ವಾಣಿಜ್ಯ ವಿಭಾಗದಲ್ಲಿ ಎ.ನಸ್ರೀನ್-550, ಎ.ಪಿ.ತಿಪ್ಪೇಸ್ವಾಮಿ-543, ವಿ.ಶಿವಕುಮಾರ್-502, ಗುರುಪಾದಮ್ಮ-497, ಜಿ.ಸ್ವಾತಿ-491, ಬಲ್ಕಿಷ್‌ಭಾನು-494, ಜೆ.ಐಶ್ವರ್ಯ-482, ಪಿ.ಅಂಜಿನಮ್ಮ-468 ಅಂಕ ಪಡೆದಿದ್ದಾರೆ. ಸಂಸ್ಥೆಯ ಅಧ್ಯಕ್ಷ ಎಸ್.ಸಂದೀಪ್ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

### ಕಾರಜೋಳಗೆ ಗೂಳಿಹಟ್ಟಿಶೇಖರ್ ಬೆಂಬಲ

» ಹೊಸದುರ್ಗ

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಟಿಕೇಟ್ ಕೈತಪ್ಪಿದ ಹಿನ್ನೆಲೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಿ ಬಿಜೆಪಿಗೆ ಸೆಡ್ಡು ಹೊಡೆದಿದ್ದ ಮಾಜಿ ಮಂತ್ರಿ ಹಾಗೂ ಮಾಜಿ ಶಾಸಕ ಗೂಳಿಹಟ್ಟಿ ಶೇಖರ್ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಅವರಿಗೆ ಬೆಂಬಲ ಘೋಷಣೆ ಮಾಡಿದ್ದಾರೆ. ವಾಟ್ಸ್‌ಆಪ್ ನಲ್ಲಿ ತಮ್ಮ ಆಡಿಯೋ ಸಂಭಾಷಣೆ ಮಾಡಿ ಬಿಟ್ಟಿರುವ ಗೂಳಿಹಟ್ಟಿ ದೇಶದಲ್ಲಿ ನರೇಂದ್ರ ಮೋದಿ ಅವರು ಮತ್ತೆ ಪ್ರಧಾನಿ ಆಗಬೇಕು. ನಾನು ಮೋದಿ ಸಾಹೇಬರ ಅಭಿಮಾನಿ. ಈ ಕಾರಣಕ್ಕೆ ನಮ್ಮೆಲ್ಲಾ ಕಾರ್ಯಕರ್ತರು ಗೋವಿಂದ ಕಾರಜೋಳ ಅವರಿಗೆ ಮತ ಹಾಕಿಸಬೇಕು ಎಂದಿದ್ದಾರೆ. ಇದೇ ಏಪ್ರಿಲ್ 16 ರಂದು ನಮ್ಮ ಕಾರ್ಯಕರ್ತರು, ಬೆಂಬಲಿಗರ ಸಭೆ ಕರೆದು ಯಾರಿಗೆ ಬೆಂಬಲ ಸೂಚಿಸಬೇಕು ಎನ್ನುವುದನ್ನು ಹೇಳುವುದಾಗಿ ತಿಳಿಸಿದ್ದೆ. ಆದರೆ, ಅಂದು ಚುನಾವಣಾಧಿಕಾರಿಗಳು ಅನುಮತಿ ನೀಡಿಲ್ಲ. ಅನುಮತಿ ಸಿಕ್ಕರೆ ಸಭೆ ನಡೆಸೋಣ. ಇಲ್ಲದಿದ್ದರೆ ನಾನೇ ಹಳ್ಳಿಗಳಿಗೆ ಬರುತ್ತೇನೆ ಎಂದು ಹೇಳಿದ್ದಾರೆ. ನಮ್ಮ ತಾಲೂಕಿಗೆ ಅಪಾರ ಪ್ರಮಾಣದಲ್ಲಿ ಅನುದಾನ ನೀಡಿರುವ ಹಿರಿಯರಾದ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಿರುವ ಗೋವಿಂದ ಕಾರಜೋಳ ಅವರಿಗೆ ಮತ ಹಾಕಲು ಮತ್ತು ಹಾಕಿಸಲು ಬೆಂಬಲಿಗರು, ಕಾರ್ಯಕರ್ತರಿಗೆ ಮತ ಹಾಕಲು ಮನವಿ ಮಾಡುತ್ತೇನೆ ಎಂದಿದ್ದಾರೆ.

ಕುಮಾರಸ್ವಾಮಿ ಸೇರ್ಪಡೆಯಿಂದ ಬಿಜೆಪಿಗೆ ಆನೆಬಲ : ಬಿ.ಎಸ್.ಯಡಿಯೂರಪ್ಪ

# ಕಾಂಗ್ರೆಸ್‌ನಲ್ಲಿ ಪ್ರಧಾನಿ ಅಭ್ಯರ್ಥಿ ಯಾರು?

» ಚಳ್ಳಕೆರೆ

ಚಿತ್ರದುರ್ಗ ಲೋಕಸಭಾ ಕ್ಷೇತ್ರವೂ ಸೇರಿದಂತೆ ರಾಜ್ಯದ 28 ಕ್ಷೇತ್ರಗಳಲ್ಲೂ ಜೆಡಿಎಸ್-ಬಿಜೆಪಿ ಮೈತ್ರಿಕೂಟದ ಅಭ್ಯರ್ಥಿಗಳು ಜಯಸಾಧಿಸುವ ಮೂಲಕ ಮತ್ತೊಮ್ಮೆ ರಾಷ್ಟ್ರದ ಪ್ರಧಾನಮಂತ್ರಿಯಾಗಿ ಮೂರನೇ ಬಾರಿಗೆ ನರೇಂದ್ರಮೋದಿಯವರು ಅಧಿಕಾರ ಸ್ವೀಕರಿಸುವ ಕ್ಷಣಗಳಿಗಾಗಿ ಕಾಯುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ಅವರು, ಶನಿವಾರ ನಗರದ ರಾಘವೇಂದ್ರ ಕಲ್ಯಾಣಮಂಟಪದಲ್ಲಿ ಕೆ.ಟಿ.ಕುಮಾರಸ್ವಾಮಿ ಬಿಜೆಪಿ ಸೇರ್ಪಡೆ ಮತ್ತು ಕಾರ್ಯಕರ್ತರ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ರಾಜ್ಯವೂ ಸೇರಿದಂತೆ ರಾಷ್ಟ್ರದಲ್ಲಿ ಕಾಂಗ್ರೆಸ್ ದಿವಾಳಿ ಹಂಚಿನಲ್ಲಿದೆ, ಕಾಂಗ್ರೆಸ್ ಪಕ್ಷದಲ್ಲಿ ಪ್ರಧಾನಿ ಅಭ್ಯರ್ಥಿ ಯಾರು ಎಂಬ ಬಗ್ಗೆ ಉತ್ತರವಿಲ್ಲ.

ಅವರೇ ರಚಿಸಿಕೊಂಡ ಇಂಡಿಯಾ ಒಕ್ಕೂಟ ಇಂದು ಚಿದ್ರವಾಗಿದೆ. ಮೋದಿಯವರನ್ನು ಸೋಲಿಸಲು ಒಂದಾದ ಜನ ಮೋದಿಯವರ ಜನಪ್ರಿಯತೆ ಕಂಡು ಕಾಂಗ್ರೆಸ್ ಮೈತ್ರಿಕೂಟಕ್ಕೆ ಗುಡ್‌ಬೈ ಹೇಳಿ ಹೊರಬರುತ್ತಿದ್ದಾರೆ. ಇದು ರಾಷ್ಟ್ರದಲ್ಲಿ ಮತ್ತೊಮ್ಮೆ ಎನ್‌ಡಿಎ ಮೈತ್ರಿಕೂಟಅಧಿಕಾರಕ್ಕೆ ಬಂದು ಮೋದಿ ಪ್ರಧಾನಿಯಾಗಿ ಹ್ಯಾಟಿಕ್ ಸಾಧಿಸುವುದುಕ್ಕೆ ಪುರಾವೆಯಾಗಿದೆ ಎಂದರು.





ಪ್ರಾಸ್ತಾವಿಕವಾಗಿ ಮಾತನಾಡಿದ ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್, ಇಡೀ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಯ ವಾತಾವರಣ ದಿನದಿನಕ್ಕೂ ಹೆಚ್ಚುತ್ತಿದೆ.

ಈ ಕ್ಷೇತ್ರದಲ್ಲಿ ಕುಮಾರಸ್ವಾಮಿ ಸೇರ್ಪಡೆಯಿಂದ ಪಕ್ಷದ ಗೆಲುವು ಹತ್ತಿರವಾಗಿದೆ. ಬಿಜೆಪಿಯಲ್ಲಿ ಸಮರ್ಥನಾಯಕರು ಇದ್ದಾರೆ. ಅಭ್ಯರ್ಥಿ ಗೋವಿಂದಕಾರಜೋಳ ಜನಾನುರಾಗಿ ನಾಯಕರಾಗಿದ್ದಾರೆ ಎಂದರು.

ಗಂಗಾವತಿ ಶಾಸಕ ಜನಾರ್ಧನರೆಡ್ಡಿ ಮಾತನಾಡಿ, ಕಾಂಗ್ರೆಸ್ ಪಕ್ಷದಲ್ಲಿ ಗೆಲುವು ಸಾಧಿಸುವ ಸಾಮರ್ಥ್ಯ ಕಡಿಮೆಯಾಗುತ್ತಿದೆ. ಲೋಕಸಭಾ ಚುನಾವಣೆಯಲ್ಲಿ ಪಕ್ಷದಿಂದ ಸ್ಪರ್ಧಿಸಿರುವ ಅಭ್ಯರ್ಥಿಗಳಿಗೆ ಈಗಾಗಲೇ ಬಿಜೆಪಿ ಜನಪ್ರಿಯತೆ ನೋಡಿ ಗಲಿಬಿಲಿಗೊಂಡಿದ್ದಾರೆ. ಕಾಂಗ್ರೆಸ್ ಪಕ್ಷದ ನಾಯಕತ್ವದಿಂದ ಜನರಿಗೆ ಭ್ರಮನಿರಸನವಾಗಿದೆ. ಗ್ಯಾರಂಟಿಗಳ ಅನುಷ್ಠಾನದಲ್ಲಿ ಸುಳ್ಳು ಪ್ರಚಾರ ಪಡೆಯುತ್ತಿದ್ದಾರೆಂದರು.

ಶಾಸಕ ಬೈರತಿ ಬಸವರಾಜು ಮಾತನಾಡಿ, ಪ್ರಧಾನಮಂತ್ರಿ ನರೇಂದ್ರಮೋದಿ ವಿಶ್ವನಾಯಕರಾಗಿ ಹೊರಹೊಮ್ಮಿದ್ದಾರೆ. ವಿಶ್ವದ ಪ್ರತಿಯೊಂದು ರಾಷ್ಟ್ರದಲ್ಲೂ ಮೋದಿಯವರನ್ನು ಗೌರವಿಸುವವರ ಸಂಖ್ಯೆ ಹೆಚ್ಚಾಗಿದೆ. ನಾಡಿನ ಜನರ ಸಂಕಲ್ಪ ಮೋದಿಯವರನ್ನು ಗೆಲ್ಲಿಸುವುದಾಗಿದೆ ಎಂದರು.

ಬಿಜೆಪಿ ಸೇರ್ಪಡೆಯಾದ ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ ಮಾತನಾಡಿ, ಈ ನಾಡಿನ ಧೀಮಂತ ನಾಯಕ, ರಾಜಕೀಯ ಭೀಷ್ಮ ಬಿ.ಎಸ್.ಯಡಿಯೂರಪ್ಪನವರ ಸಮ್ಮುಖದಲ್ಲಿ ಬಿಜೆಪಿಗೆ ಮರು ಸೇರ್ಪಡೆಯಾಗುತ್ತಿರುವುದು ಸಂತಸ ತಂದಿದೆ. 2008ರಲ್ಲಿ ನಮ್ಮ ತಂದೆ ತಿಪ್ಪೇಸ್ವಾಮಿ ಶಾಸಕರಾಗಿದ್ದಾರೆ ಯಡಿಯೂರಪ್ಪನವರನ್ನುಬೆಂಬಲಿಸಿದ್ದರು. ನಾನು ಸಹ ಈ ಕ್ಷೇತ್ರದ ಅಭ್ಯರ್ಥಿ ಗೋವಿಂದಕಾರಜೋಳ ಗೆಲುವಿಗೆ ಹೆಚ್ಚು ಶ್ರಮಿಸುತ್ತೇನೆಂದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ಜಿ.ಬಸವರಾಜ ಮಂಡಿಮಠ, ಜಿಲ್ಲಾಧ್ಯಕ್ಷ ಎ.ಮುರುಳಿ, ಲಿಂಗಮೂರ್ತಿ,ಬಾಳೆಮಂಡಿರಾಮದಾಸ್, ಜಯಪಾಲಯ್ಯ, ಅನಿಲ್‌ಕುಮಾರ್, ಮುಂತಾದವರು ಉಪಸ್ಥಿತರಿದ್ದರು.

ಪಕ್ಷದ ಕಾರ್ಯಕರ್ತರ ಪರಿಶ್ರಮ, ಸಹಕಾರದಿಂದ ಬಿಜೆಪಿ ಗೆಲುವು ಸಾಧ್ಯ

## ವೀರಶೈವ ಸಮಾಜದ ಅಭ್ಯುದಯಕ್ಕೆ ಸದಾ ಸಹಕಾರ: ಬಿ.ಎಸ್.ಯಡಿಯೂರಪ್ಪ

» ಚಳ್ಳಕೆರೆ

ಲೋಕಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಲು ಎಲ್ಲಾ ರೀತಿಯಪರಿಶ್ರಮವನ್ನು ಕಾರ್ಯಕರ್ತರು ವಹಿಸಬೇಕಿದೆ. ರಾಜ್ಯದಲ್ಲಿ ಹೆಚ್ಚು ಸ್ಥಾನಗಳಲ್ಲಿ ಬಿಜೆಪಿ ಜಯಗಳಿಸುವುದು ಮುಖ್ಯವಾಗಿದೆ. ಜೆಡಿಎಸ್-ಬಿಜೆಪಿ ಮೈತ್ರಿಯಿಂದ ಕಾಂಗ್ರೆಸ್ ಪಕ್ಷ ಕಂಗೆಟ್ಟಿದೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು.

ಅವರು, ಮಾಜಿ ಶಾಸಕ ಜಿ.ಬಸವರಾಜಮಂಡಿಮಠರವರ ನಿವಾಸದಲ್ಲಿ ವೀರಶೈವ ಮುಖಂಡರು ಮತ್ತು ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ರಾಜ್ಯದಲ್ಲಿ ಕಳೆದ ಹಲವಾರು ವರ್ಷಗಳಿಂದ ವೀರಶೈವ ಸಮಾಜ ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸುತ್ತಾ ಬಂದಿದೆ. ವೀರಶೈವ ಸಮಾಜದ ಮುಖಂಡರು ನಾನು ಭರವಸೆ ನೀಡುತ್ತೇನೆ. ಬಿಜೆಪಿ ಸದಾಕಾಲ ನಿಮ್ಮೊಂದಿಗೆ ಇದ್ದು ನಿಮ್ಮ ಅಭ್ಯುದಯಕ್ಕಾಗಿ ಹೋರಾಟ ನಡೆಸಲಿದೆ ಎಂದರು. ಇದೇ ಸಂದರ್ಭದಲ್ಲಿ ವೀರಶೈವ ಮುಖಂಡರಿಂದಯಡಿಯೂರಪ್ಪನವರನ್ನು ಸನ್ಮಾನಿಸಲಾಯಿತು.



ಮಾಜಿ ಶಾಸಕ ಜಿ.ಬಸವರಾಜ ಮಂಡಿಮಠ,ಸೋಮಶೇಖರಮಂಡಿಮಠ, ಕೆ.ಎಂ.ಯತೀಶ್, ಬಿ.ಎಸ್.ಶಿವಪುತ್ರಪ್ಪ, ಡಾ.ಕೆ.ಎಂ.ಜಯಕುಮಾರ್,ಜಯಪ್ರಕಾಶ್, ಆರ್.ನಾಗೇಶ್, ಮಾತೃಶ್ರೀಎನ್. ಮಂಜುನಾಥ, ಪ್ರಸನ್ನಕುಮಾರ್, ಸತೀಶ್‌ಮಂಡಿಮಠ, ಬಾಳೆಮಂಡಿ ರಾಮದಾಸ್, ಆದಿಭಾಸ್ಕರಶೆಟ್ಟಿ, ಕುಮಾರಸ್ವಾಮಿ, ಭರತೇಶ್‌ರೆಡ್ಡಿ, ಗಂಗಾಧರ, ನಾಗರಾಜು ಮುಂತಾದವರು ಉಪಸ್ಥಿತರಿದ್ದರು.

## ರಾಜ್ಯದಲ್ಲಿ ಬಿಜೆಪಿ ಪರ ಅಲೆ

» ಚಳ್ಳಕೆರೆ



ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಪರವಾಗಿ ಬಲವಾದ ಅಲೆ ಇದೆ. ವಿಶೇಷವಾಗಿ ರಾಜ್ಯದ ದಲಿತ ಸಮೂಹದ ಹಿರಿಯ ನಾಯಕ, ಸಚಿವರಾಗಿ ಸೇವೆ ಸಲ್ಲಿಸಿದ ಅಪಾರವಾದ ಅನುಭವ ಹೊಂದಿರುವ ಕ್ರಿಯಾಶೀಲ ವ್ಯಕ್ತಿ ಗೋವಿಂದಕಾರಜೋಳರವರನ್ನು ಅಭ್ಯರ್ಥಿಂಯಾಗಿ ಮಾಡಿದ್ದೇವೆ. ಈ ಕ್ಷೇತ್ರದಲ್ಲಿ ಅವರ ಗೆಲುವು ಶತಸಿದ್ದವೆಂದು ಮಾಜಿ ಮುಖ್ಯಮಂತ್ರಿ, ಬಿಜೆಪಿ ಹಿರಿಯ ದುರೀಣ ಬಿ.ಎಸ್.ಯಡಿಯೂರಪ್ಪ ತಿಳಿಸಿದರು. ಅವರು, ಖಾಸಗಿ ಕಲ್ಯಾಣಮಂಟಪದಲ್ಲಿ ಕಾರ್ಯಕರ್ತರ ಸಭೆಯ ನಂತರ ಮಾಧ್ಯಮದವರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಮೋದಲನೆ ಹಂತದ ಮತದಾನ ಏ.26ರಂದು ನಡೆಯಲಿದ್ದು, 14 ಕ್ಷೇತ್ರಗಳಲ್ಲಿ ಬಹುತೇಕ ಎಲ್ಲೆಡೆ ಬಿಜೆಪಿ ಗೆಲುವು ಸಾಧಿಸಲಿದೆ. ಕಾಂಗ್ರೆಸ್ ಪಕ್ಷದ ಸುಳ್ಳು ಆರೋಪಗಳಿಗೆ ಜನತೆ ಈಗಾಗಲೇ ಬೇಸರಗೊಂಡಿದ್ದಾರೆ. ಜನರ ಸಂಕಲ್ಪ ಬಿಜೆಪಿಯನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವುದಾಗಿದೆ. ಪ್ರಧಾನಮಂತ್ರಿ ನರೇಂದ್ರಮೋದಿಯವರ ಜನಪರ ಯೋಜನೆಗಳಿಗೆ ಮತದಾರರು ಮಾರುಹೋಗಿದ್ದಾರೆ. ಕಾಂಗ್ರೆಸ್ ಪಕ್ಷದಲ್ಲಿ ರಾಷ್ಟ್ರವನ್ನು ಮುನ್ನಡೆಸುವವರು ಯಾರೂ ಇಲ್ಲವೆಂಬ ಭಾವನೆ ಮತದಾರರಲ್ಲಿದೆ. ನರೇಂದ್ರಮೋದಿಯವರ ಆಡಳಿತದಲ್ಲಿ ಯಾವುದೇ ಕಪ್ಪುಚುಕ್ಕೆ ಇಲ್ಲ. ಆದ್ದರಿಂದ ಬಿಜೆಪಿ ಗೆಲುವು ಗ್ಯಾರಂಟಿ ಎಂದರು.




## ಚಳ್ಳಕೆರೆ ಕ್ಷೇತ್ರ ವ್ಯಾಪ್ತಿಯ ಮತಗಟ್ಟೆಗಳಿಗೆ ವೀಕ್ಷಕ ಮನೋಹರ ಮರಂಡಿ ಭೇಟಿ

» ಚಳ್ಳಕೆರೆ

ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಮತಗಟ್ಟೆಗಳು, ತಪಾಸಣಾ ಕೇಂದ್ರ ಹಾಗೂ ಅಂಗವಿಕಲ, ವೃದ್ಧರ ಮತದಾನದ ಬಗ್ಗೆ ಚುನಾವಣಾ ವೀಕ್ಷಕರಾದ ಮನೋಹರಮರಂಡಿ ಭೇಟಿ ನೀಡಿ ಹಲವಾರು ಮಾಹಿತಿಯನ್ನು ಪಡೆದರಲ್ಲದೆ, ಸಹಾಯಕ ಚುನಾವಣಾಧಿಕಾರಿಗಳಿಗೆ ಕೆಲವೊಂದು ನಿರ್ದೇಶನಗಳನ್ನು ನೀಡಿದರು.

ಪ್ರಾರಂಭದ ಹಂತದಲ್ಲಿ ಕ್ಷೇತ್ರ ವ್ಯಾಪ್ತಿಯ ಬಾಲೇನಹಳ್ಳಿ ಮತಗಟ್ಟೆಗೆ ತೆರಳಿ ವಯೋವೃದ್ಧರು ಮತದಾನ ಮಾಡಿದ ಬಗ್ಗೆ ಅಲ್ಲಿನ ಮತಗಟ್ಟೆ ಅಧಿಕಾರಿಯಿಂದ ಮಾಹಿತಿ ಪಡೆದರು. ಇದೇ ಸಂದರ್ಭದಲ್ಲಿ ಚಳ್ಳಕೆರೆ ನಗರದ ಮತಗಟ್ಟೆಗಳು, ಗೊರ್ಲಕಟ್ಟೆ, ನನ್ನಿವಾಳ, ರಾಮಜೋಗಿಹಳ್ಳಿ ಮುಂತಾದ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಸಹಾಯಕ ಚುನಾವಣಾಧಿಕಾರಿ ಬಿ.ಆನಂದ ಮಾಹಿತಿ ನೀಡಿ, ವಿಕಲಚೇತನ ಮತ್ತು 85 ವರ್ಷಗಳ ಮೇಲ್ಪಟ್ಟ ವಯೋವೃದ್ಧ ಮತದಾರರಿಗೆ ಮನೆಯಲ್ಲೇ ಮತದಾನ ಮಾಡುವ ಅವಕಾಶವನ್ನು ಚುನಾವಣಾ ಆಯೋಗ ನೀಡಿದ್ದು, ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 220 ಮತದಾರರಿಂದ್ದು ಆ ಪೈಕಿ 183 ಮತಗಳು ಚಲಾವಣೆಯಾಗಿವೆ. ಇದುವರೆಗೂ ಒಟ್ಟು 499 ಮತಗಳಿಗೆ 398 ಮತಗಳು ಚಲಾವಣೆಯಾಗಿವೆ ಎಂದು ತಿಳಿಸಿದರು.

ತಹಶೀಲ್ದಾರ್ ರೇಹಾನ್‌ಪಾಷ, ಮಂಜುನಾಥ, ಬಿಇಒ ಕೆ.ಎಸ್.ಸುರೇಶ್, ಪೌರಾಯುಕ್ತ ಜೀವನ್‌ಕಟ್ಟಿಮನಿ, ಚುನಾವಣೆ ಶಿರಸ್ಥೇದಾರ್ ಹಸೀನಬೇಗಂ, ಶ್ರೀಧರ, ಓಬಳೇಶ್, ಕಂದಾಯಾಧಿಕಕಾರಿ ಲಿಂಗೇಗೌಡ, ಗ್ರಾಮಲೆಕ್ಕಿಗ ಪ್ರಕಾಶ್ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T